ಸಂಪುಟ : 10 ಸಂಚಿಕೆ: 199 ಪುಟ : 4+2 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 199 Pages : 4+2 Price : 3.00 Tuesday September 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರಜಾಪ್ರಭುತ್ವ ದಿನಾಚರಣೆಯ ಪ್ರಯುಕ್ತ ಚಿತ್ರಕಲಾ ಪ್ರದರ್ಶನ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ಚಿತ್ರಕಲಾ ಪ್ರದರ್ಶನ ಏರ್ಪಡಿಸಲಾಗಿತ್ತು. ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಚಿತ್ರಕಲಾ ಪ್ರದರ್ಶನಕ್ಕೆ ಚಿತ್ರ ಬಿಡಿಸುವ ಮೂಲಕ ಚಾಲನೆ ನೀಡಿದರು.

ಕರ್ನಾಟಕ ವಸತಿ ಶಿಕ್ಷಣಗಳ ಸಂಸ್ಥೆಯ ಗದಗ ಜಿಲ್ಲಾ ಚಿತ್ರಕಲಾ ಶಿಕ್ಷಕರು ರಚಿಸಿದ ಮಹತ್ವ ಸಾರುವ ಚಿತ್ರಗಳು ನೆರೆದ ಗಣ್ಯರ ಹಾಗೂ ಸಾರ್ವಜನಿಕರ ಗಮನ ಸೆಳೆಯುವಲ್ಲಿ ಯಶಸ್ವಿಯಾದವು. ನನ್ನ ಮತ ನನ್ನ ಹಕ್ಕು, ದೇಶಕ್ಕಾಗಿ ಮತದಾನ, ಮತದಾನದಲ್ಲಿ ಒಗ್ಗಟ್ಟಿರಲಿ, ಭಾರತದ ಸಂವಿಧಾನ, ಎಲ್ಲ ಜಾತಿ-ಧರ್ಮದವರು ಮತದಾನ ಮಾಡಬೇಕು, ಒಂದು ಮತ ಒಂದು ಮೌಲ್ಯ, ಮತದಾನ ನಮ್ಮ ಮನೆಯ ಹೆಣ್ಣುಮಕ್ಕಳಷ್ಟೇ ಶ್ರೇಷ್ಠ-ಯಾರೂ ಮಾರಿಕೊಳ್ಳಬಾರದು, ಮತದಾನದಲ್ಲಿ ಅಡಗಿದೆ ಮುಂದಿನ ಭವಿಷ್ಯ, ನನ್ನ ದೇಶದ ಭವಿಷ್ಯ ನನ್ನ ಬೆರಳಿನ ತುದಿಯಲ್ಲಿದೆ, ಮತದಾನ ಮರೆಯದಿರಿ ಎಂಬಿತ್ಯಾದಿ ವಿಷಯಗಳ ಕುರಿತು ಚಿತ್ರಕಲಾ ಶಿಕ್ಷಕರು ರಚಿಸಿದ ▸▸3ನೇ ಪುಟಕ್ಕೆ

### ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ ಅಭಿಮತ

# ಭಾರತದ ಪ್ರಜಾಪ್ರಭುತ್ವ ವಿಶ್ವದಲ್ಲಿಯೇ ಶ್ರೇಷ್ಠ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವದಲ್ಲಿ ಹಲವಾರು ದೇಶಗಳು ಪ್ರಜಾಪ್ರಭುತ್ವಕ್ಕೆ ತಮ್ಮ ತಮ್ಮ ವಿಚಾರಗಳನ್ನು ಅಳವಡಿಸಿಕೊಂಡಿವೆ. ಆದರೆ, ಭಾರತ ದೇಶವು ವಿಶ್ವದಲ್ಲಿಯೇ ಶ್ರೇಷ್ಠ ಪ್ರಜಾಪ್ರಭುತ್ವ ಹೊಂದಿದ ದೇಶವಾಗಿದೆ ಎಂದು ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯ ಹಾಲ್‌ನಲ್ಲಿ ಸೋಮವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ನಂತರ, ಪ್ರಜೆಗಳ ಹಿತಕ್ಕಾಗಿ ಪ್ರಜಾಪ್ರಭುತ್ವದ ಅವಶ್ಯಕತೆ ಇದೆ ಎನ್ನುವ ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರದಿಂದಲೇ ದೇಶವು ಅಖಂಡ ಭಾರತವಾಗಿ ಉಳಿಯಲು ಸಾಧ್ಯವಾಯಿತು. ಡಾ. ಬಿ.ಆರ್. ಅಂಬೇಡ್ಕರರ ಚಿಂತನೆಗಳು ಪೂರ್ಣ ಪ್ರಮಾಣದಲ್ಲಿ ಸಾಧಿಸಬೇಕಾಗಿದೆ. ವಿಶೇಷವಾಗಿ ಆರ್ಥಿಕ ಮತ್ತು ಸಾಮಾಜಿಕ ಸಮಾನತೆ ತರಬೇಕಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಯಲ್ಲಿಲ್ಲದ ದೇಶಗಳೂ ಸಹಿತ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಒಪ್ಪಿಕೊಳ್ಳುವ ಮಹತ್ವದ ಹೆಜ್ಜೆ ಇಡಬೇಕು. ಪ್ರಜಾಪ್ರಭುತ್ವದಲ್ಲಿ ಶಾಂತಿ ಮತ್ತು ಸಮಾನತೆಯ ಅವಕಾಶ ಕಲ್ಪಿಸಲಾಗಿದೆ ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪ್ರಜೆಗಳ ಅಧೀನದಲ್ಲಿನ ಸರ್ಕಾರವೇ ಪ್ರಜಾಪ್ರಭುತ್ವವಾಗಿದೆ. ಪ್ರತಿಯೊಬ್ಬರೂ ಸ್ವಾತಂತ್ರ್ಯವಾಗಿ ಇರುವುದು ಸಂವಿಧಾನದಿಂದ ಸಾಧ್ಯವಾಗಿದೆ. ಸಂವಿಧಾನದ ಬೆಲೆ ಶಿಕ್ಷಣ ಪಡೆದಾಗ ಮಾತ್ರ ಸಾಧ್ಯವಾಗುತ್ತದೆ. ಸಂವಿಧಾನದಲ್ಲಿ ಮೀಸಲಾತಿ ಇರದೇ ▸▸3ನೇ ಪುಟಕ್ಕೆ

> ವಿಶ್ವದ 195 ದೇಶಗಳಲ್ಲಿ ಭಾರತ ದೇಶವು ಪ್ರಜಾಪ್ರಭುತ್ವದಲ್ಲಿ ತನ್ನದೇ ಆದ ವೈಶಿಷ್ಟತೆ ಹಾಗೂ ಮಹತ್ವ ಹೊಂದಿದೆ. ವಿವಿಧತೆಯಲ್ಲಿ ಏಕತೆಯನ್ನು ಹಾಗೂ ಏಕತೆಯಲ್ಲಿ ವಿವಿಧತೆಯನ್ನು ಸಾರಿದ ದೇಶ ನಮ್ಮದು. ಸಂವಿಧಾನದ ಮೂರು ಅಂಗಗಳು ಒಂದಕ್ಕೊಂದು ಪೂರಕವಾಗಿವೆ. 18 ವರ್ಷ ಪೂರೈಸಿದ ಪ್ರತಿ ಸ್ತ್ರೀ-ಪುರುಷರೂ ಮುಕ್ತವಾಗಿ ತಮ್ಮ ಮತದಾನ ಮಾಡಬಹುದಾಗಿದೆ. ಬಂದೂಕಿನ ಅಸ್ತ್ರಕ್ಕಿಂತ ಮತದಾನವು ಬಲಿಷ್ಠವಾಗಿದೆ. ನಿರಂತರ ಜಾಗರೂಕತೆಯೇ ಪ್ರಜಾಪ್ರಭುತ್ವದ ಬೆಲೆಯಾಗಿದೆ.
>
> **- ಎಚ್.ಎ. ಕರ್ನೂಲ.**
> ಸರ್ಕಾರಿ ಪ.ಪೂ ಕಾಲೇಜು ಉಪನ್ಯಾಸಕ.

> ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಡಾ. ಬಿ.ಆರ್.ಅಂಬೇಡ್ಕರ್ ಸಂವಿಧಾನವನ್ನು ರಚಿಸದೇ ಇದ್ದರೆ ಕೆಳಹಂತದಲ್ಲಿರುವ ಪ್ರಜೆಗಳು ಅಧಿಕಾರ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಭಾರತವು ಬಲಿಷ್ಠ ಹಾಗೂ ಶ್ರೇಷ್ಠವಾದ ಪ್ರಜಾಪ್ರಭುತ್ವ ಹೊಂದಿದ ದೇಶವಾಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಎಲ್ಲ ಸೌಲಭ್ಯಗಳು ದೊರಕಬೇಕಾಗಿದೆ ಎಂದರು.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರಸ್ತೆ ಗದಗ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆ. 17ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸದರಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ವಿವೇಕಾನಂದ ನಗರ, ಹೊಸ ಬಸ್ ನಿಲ್ದಾಣ, ಪಂಚಾಕ್ಷರಿ ನಗರ, ರಾಜೀವಗಾಂಧಿ ನಗರ, ಬುರುಬುರೆ ಪ್ಲಾಟ್, ಆನಂದಾಶ್ರಮ ರಸ್ತೆ, ಜೆ.ಟಿ ಕಾಲೇಜ್ ರಸ್ತೆ, ಹಾತಲಗೇರಿ ಎನ್.ಜೆ.ವೈ ಹಾಗೂ ಇ.ಐ.ಪಿ ಫೀಡರ್‌ಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ವಾರ್ಷಿಕ ಸರ್ವ ಸಾಧಾರಣಾ ಸಭೆ ಸೆ.18ಕ್ಕೆ

■ ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಮಾರನಬಸರಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 2024-25ನೇ ಸಾಲಿನ ವಾರ್ಷಿಕ ಸರ್ವ ಸಾಧಾರಣಾ ಸಭೆಯನ್ನು ಸೆ.18ರಂದು ಸಂಜೆ 4ಕ್ಕೆ ಸಹಕಾರಿ ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.

ಸಹಕಾರಿ ಸಂಘದ ಉಪಾಧ್ಯಕ್ಷರು, ನಿರ್ದೇಶಕರು, ಸರ್ವ ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳಬೇಕೆಂದು ಸಹಕಾರಿ ಸಂಘದ ಮುಖ್ಯ ಕಾರ್ಯನಿರ್ವಾಹಕ ಎಸ್.ಬಿ. ಪಾಟೀಲ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ವಿಶ್ವೇಶ್ವರಯ್ಯನವರ ಬದುಕು ನಮಗೆ ಮಾರ್ಗದರ್ಶಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಸ್ತುಬದ್ಧ ಜೀವನ ಹಾಗೂ ಸಮಯ ಪ್ರಜ್ಞೆಯ ಸಾಕಾರ ಮೂರ್ತಿಯಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯನವರ ಬದುಕು ನಮಗೆಲ್ಲಾ ಮಾರ್ಗದರ್ಶಿಯಾಗಿದೆ ಎಂದು ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಜಿಲ್ಲಾ ಸಿವ್ಹಿಲ್ ಗುತ್ತಿಗೆದಾರರ ಅಸೋಸಿಯೇಶನ್, ಲೋಕೋಪಯೋಗಿ ಇಲಾಖೆ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸಹಯೋಗದಲ್ಲಿ ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅವರು ಕಂಡ ಪ್ರತಿಯೊಂದು ಕನಸುಗಳು ನಾಡಿನ ಕನಸಾಗಿದ್ದವು. ಆ ಕನಸುಗಳನ್ನು ನನಸು ಮಾಡುವುದಕ್ಕೆ ಅವಿರತವಾಗಿ ಪ್ರಯತ್ನಿಸಿದರು. ಅವರ ಸಾಧನೆಯ ವ್ಯಾಪ್ತಿಯನ್ನು ನೋಡಿದರೆ ಅವರನ್ನು ಕೇವಲ ಇಂಜಿನಿಯರ್ ಎಂದು ಕರೆಯುವುದು ತಪ್ಪಾಗುತ್ತದೆ, ಅವರೊಬ್ಬ ಮುತ್ಸದ್ಧಿಯಾಗಿದ್ದರು. ಅದರ ಪರಿಣಾಮವೇ ಶಿಕ್ಷಣ, ಉದ್ಯಮ, ಉದ್ಯೋಗ, ಕೃಷಿ, ನೀರಾವರಿ, ಕಲೆ, ಸಾಹಿತ್ಯ, ನಾಡು-ನುಡಿ, ಇತ್ಯಾದಿಗಳ ಬಗ್ಗೆ ಕಳಕಳಿ



ಹೊಂದಿದ್ದರು ಎಂದರು.


ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕನ್ನಂಬಾಡಿ ಕಟ್ಟೆ ಮತ್ತು ಅದಕ್ಕೆ ಅಳವಡಿಸಿರುವ ಸ್ವಯಂಚಾಲಿತ ಗೇಟುಗಳು, ಭದ್ರಾವತಿಯ ಉಕ್ಕು, ಕಬ್ಬಿಣ ಹಾಗೂ ಪೇಪರ್ ಕಾರ್ಖಾನೆಗಳು, ಶರಾವತಿ ಜಲ ವಿದ್ಯುತ್ ಯೋಜನೆ ಇವೆಲ್ಲ ಅವರ ಪ್ರತಿಭೆಗೆ ಸಾಕ್ಷಿಯಾಗಿವೆ. ಹಳೆಯ ಮೈಸೂರು ಭಾಗವು ಹಚ್ಚ ಹಸಿರಿನಿಂದ ಕೂಡಿದೆ ಎಂದರೆ ಸರ್ ಎಂ.ವಿಶ್ವೇಶ್ವರಯ್ಯನವರ ಕೊಡುಗೆ ಪ್ರಮುಖವಾಗಿದೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿದರು.

> ಆಧುನಿಕ ಕಾಲದಲ್ಲಿ ಸಾಕಷ್ಟು ಬದಲಾವಣೆ ಆಗುತ್ತದೆ. ಹೊಸ ಹೊಸ ಬದಲಾವಣೆಗಳನ್ನು ಇಂದಿನ ಇಂಜಿನಿಯರ್ ಹಾಗೂ ಗುತ್ತಿಗೆದಾರರು ಅಳವಡಿಸಿಕೊಂಡು ಹೋಗಬೇಕು. ಅಂದಾಗ ಮಾತ್ರ ರಾಜ್ಯ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಈ ಭಾಗದ ಸಂಸದರು, ಶಾಸಕರು ಸೇರಿಕೊಂಡು ಗುತ್ತಿಗೆದಾರರಿಗೆ ಆಗುತ್ತಿರುವ ಸಮಸ್ಯೆ ಪರಿಹಾರ ನೀಡುವ ಬಗ್ಗೆ ಚಿಂತನೆ ಮಾಡಲಾಗುತ್ತದೆ.

ಜಿಲ್ಲಾ ಸಿವ್ಹಿಲ್ ಗುತ್ತಿಗೆದಾರರ ಅಸೋಸಿಯೇಶನ್ ಅಧ್ಯಕ್ಷ ಎಸ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಆಂಜನೇಯ ಕಟಗಿ ಮಾತನಾಡಿದರು. ಯುವ ಮುಖಂಡ ಮಿಥುನ ಪಾಟೀಲ, ಉಮೇಶ್ ನಾಯಕ, ರಾಘವೇಂದ್ರ ಪುರೋಹಿತ, ಚಂದ್ರಶೇಖರ ನಗಲಕೇರ್, ಗುರುನಾಥ, ಆರ್.ಕೆ. ಮಠದ, ಅಶೋಕ ಕಣವಿ, ಎಸ್.ಕೆ. ಪಾಟೀಲ, ವಿಜಯ ಮುಲ್ಕಿಪಾಟೀಲ, ಆರ್.ಡಿ. ರಂಗಪ್ಪನವರ, ಎಸ್.ಕೆ. ಪಾಟೀಲ, ವಿ.ಜಿ. ಮುಲ್ಕಪಾಟೀಲ, ಆರ್.ಡಿ. ರಂಗಪ್ಪನವರ, ಬಿ.ಐ. ಶಿರಗುಂಪಿ, ಸುರೇಶ ತಿರ್ಲಾಪೂರ, ಬಿ.ಎಸ್. ಮೇಟಿ, ಎ.ಎಚ್. ಪಾಟೀಲ, ಬಿ.ಆರ್. ಹೊಸಮನಿ, ಬಸವರಡ್ಡಿ ಹಂಚಿನಾಳ ಸೇರಿದಂತೆ ಇತರರು ಇದ್ದರು.

# ಶ್ರೀ ವಿಶ್ವಕರ್ಮ ಜಯಂತಿ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಶ್ರೀ ವಿಶ್ವಕರ್ಮ ಜಯಂತಿ-2025ನ್ನು ಸೆ.17ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವ ಶಿವರಾಜ ಎಸ್.ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

> ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ. ವೆಂಕಟೇಶ್ ಎಂ.ವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಕೆ.ಎಂ. ಗಾಯತ್ರಿ ಆಗಮಿಸಲಿದ್ದು, ಹಿರಿಯ ಸಾಹಿತಿ ಡಿ.ವಿ. ಬಡಿಗೇರ ಉಪನ್ಯಾಸ ನೀಡಲಿದ್ದಾರೆ.

### ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ನಡೆಸಿದ ಸಿ.ಎನ್. ಶ್ರೀಧರ್

# ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 'ಪ್ರಭುವಿನೆಡೆಗೆ ಪ್ರಭುತ್ವ' ಎಂಬ ವಿನೂತನ ಕಾರ್ಯಕ್ರಮಕ್ಕೆ ಆಗಸ್ಟ್ 15ರಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದ್ದಾರೆ. ಪ್ರಭುವಿನೆಡೆಗೆ ಪ್ರಭುತ್ವದಲ್ಲಿ ಬರುವ ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಪರಿಹಾರ ನೀಡುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಜರುಗಿದ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕ್ರೀಡಾಂಗಣ ಸೇರಿದಂತೆ ನಗರದಲ್ಲಿ ಮೂರು ಕಡೆ ಪ್ರ.ಪ್ರ. ಯಂತ್ರ ಅಳವಡಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಈ ಯಂತ್ರದ ಮೂಲಕ ಬಟನ್ ಒತ್ತಿ ಹೇಳಿಕೊಳ್ಳುವ ಮೂಲಕ ಶೀಘ್ರ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಲಿದೆ ಎಂದರು.



ಕಾರ್ಯಕ್ರಮ ಮೇಲ್ವಿಚಾರಣೆಗಾಗಿ ಈಗಾಗಲೇ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಅವರನ್ನು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿಲಾಗಿದೆ. ಎಲ್ಲ ಇಲಾಖೆ ಅಧಿಕಾರಿಗಳು ಪ್ರ.ಪ್ರದಲ್ಲಿ ದಾಖಲಾದ ದೂರುಗಳಿಗೆ ಪರಿಹಾರ ನೀಡಿ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ದಾಖಲೆಗಳೊಂದಿಗೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ಸಹಾಯ, ತುರ್ತು ವೈದ್ಯಕೀಯ ಸೇವೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತೆ ಕ್ರಮ, ಕಾನೂನು ಬಾಹಿರ ಹಾಗೂ ಸಾಮಾಜ ವಿರೋಧಿ ಚಟುವಟಿಕೆ ವಿರುದ್ಧ ಕ್ರಮ, ಜಮೀನು ಹಕ್ಕುಪತ್ರ, ಪಿಂಚಣಿ ವಿಷಯಗಳಿಗೆ ಸಂಬಂಧಿಸಿದಂತೆ ಮತ್ತು ಪಂಚಾಯಿತಿಗಳ ಕೆಲ ಸಮಸ್ಯೆಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ. ಸಂಬಂಧಿತ ಇಲಾಖಾಧಿಕಾರಿಗಳು ದೂರು ಅಥವಾ ಸಮಸ್ಯೆ ದಾಖಲಾದ ತಕ್ಷಣ ಅದರ ಪರಿಹಾರಕ್ಕೆ ಕಾರ್ಯಪ್ರವೃತ್ತರಾಗಬೇಕು. ಯಾವುದೇ ಬೇಜವಾಬ್ದಾರಿ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಅನಿವಾರ್ಯ ಎಂದು ಅವರು ಎಚ್ಚರಿಸಿದರು.

ಸಾರ್ವಜನಿಕರಿಂದ ಪ್ರ.ಪ್ರ ಯಂತ್ರಗಳ ಮೂಲಕ ಸ್ವೀಕೃತವಾದ ದೂರುಗಳನ್ನು ಪರಿಶಿಲಿಸಿ 7 ದಿನಗಳೊಳಗಾಗಿ ಪರಿಹಾರ ಸೂಚಿಸಬೇಕು. ದೂರುದಾರರಿಗೆ ಸ್ಪಷ್ಟ ಉತ್ತರ ನೀಡಬೇಕು. ▸▸3ನೇ ಪುಟಕ್ಕೆ

> ಜಿಲ್ಲಾ ನೋಡಲ್ ಅಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಪ್ರ.ಪ್ರ. ಕಾರ್ಯಕ್ರಮ ಜಾರಿ ಆರಂಭದಿಂದ ಈವರೆಗೆ ಒಟ್ಟು 13 ಸಮಸ್ಯೆ/ದೂರು ದಾಖಲಾಗಿದ್ದು, ಸಂಬಂಧಿತ ಇಲಾಖೆಗಳಿಗೆ ಪರಿಹಾರಕ್ಕೆ ಸೂಚಿಸಲಾಗಿದೆ. ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ, ನಗರಸಭೆ, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಾರ್ವಜನಿಕರು ಸಮಸ್ಯೆಗಳನ್ನು ತಿಳಿಸಿದ್ದು, ಶೀಘ್ರ ಪರಿಹಾರ ದೊರಕಿಸಿ ವರದಿ ನೀಡುವಂತೆ ತಿಳಿಸಿದರು.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಯ್ಕೆ ಪ್ರಶ್ನಿಸಿ ಪ್ರತಾಪ್ ಸಿಂಹ ಸಲ್ಲಿಸಿದ್ದ ಪಿಐಎಲ್ ವಜಾಗೊಳಿಸಿದ ಹೈಕೋರ್ಟ್




■ ವಿಜಯಸಾಕ್ಷಿ ಸುದ್ದಿ, ಮೈಸೂರು

ಸೆಪ್ಟೆಂಬರ್ 22ರಂದು ಪ್ರಾರಂಭವಾಗುವ ಮೈಸೂರು ದಸರಾ ಉತ್ಸವ–2025 ಅನ್ನು ಉದ್ಘಾಟಿಸಲು ಅಂತಾರಾಷ್ಟ್ರೀಯ ಬೂಕರ್ ವಿಜೇತ ಲೇಖಕಿ ಮತ್ತು ಹೋರಾಟಗಾರ್ತಿ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವ ರಾಜ್ಯ ಸರ್ಕಾರದ ನಿರ್ಧಾರದಲ್ಲಿ ಮಧ್ಯಪ್ರವೇಶಿಸಲು ಕರ್ನಾಟಕ ಹೈಕೋರ್ಟ್ ಸೆಪ್ಟೆಂಬರ್ 15ರಂದು ನಿರಾಕರಿಸಿದೆ.

ಕೊಡಗು–ಮೈಸೂರು ಲೋಕಸಭಾ ಕ್ಷೇತ್ರದ ಮಾಜಿ ಸಂಸದ ಪ್ರತಾಪ್ ಸಿಂಹ, ಬೆಂಗಳೂರಿನ ನಿವಾಸಿಗಳಾದ ಗಿರೀಶ್ ಕುಮಾರ್ ಟಿ, ಸೌಮ್ಯ ಆರ್. ಮತ್ತು ಎಚ್.ಎಸ್. ಗೌರವ್ ಎಂಬವರು ಸಲ್ಲಿಸಿದ್ದ ಅರ್ಜಿಗಳನ್ನು ವಜಾಗೊಳಿಸಿ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ.ಎಂ ಜೋಶಿ ಅವರಿದ್ದ ವಿಭಾಗೀಯ ಪೀಠ ಆದೇಶ ನೀಡಿದೆ.

“ವಿಭಿನ್ನ ನಂಬಿಕೆಯ ವ್ಯಕ್ತಿಗೆ ಆಹ್ವಾನ ನೀಡುವುದು ಸಾಂವಿಧಾನಿಕ ಅಥವಾ ಕಾನೂನುಬದ್ಧ ಹಕ್ಕನ್ನು ಉಲ್ಲಂಘಿಸುತ್ತದೆ ಎಂಬ ವಾದಗಳನ್ನು ನಾವು ಒಪ್ಪಿಕೊಳ್ಳಲು ಸಾಧ್ಯವಿಲ್ಲ” ಎಂದು ನ್ಯಾಯ ಪೀಠ ಹೇಳಿದೆ.

2023ರಲ್ಲಿ ನಡೆದ ಸಾಹಿತ್ಯ ಕಾರ್ಯಕ್ರಮವೊಂದರಲ್ಲಿ ಬಾನು ಮುಷ್ತಾಕ್ ಅವರು ಹಿಂದೂ ವಿರೋಧಿ ಮತ್ತು ಕನ್ನಡ ವಿರೋಧಿ ಹೇಳಿಕೆಗಳನ್ನು ನೀಡಿದ್ದಾರೆ. ಅಲ್ಲದೆ, ಮೈಸೂರು ರಾಜಮನೆತನದ ಪ್ರತಿನಿಧಿಗಳ ಜೊತೆ ಚರ್ಚಿಸದೆ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸಲಾಗಿದೆ ಎಂದು ಪ್ರತಾಪ್ ಸಿಂಹ ತನ್ನ ಅರ್ಜಿಯಲ್ಲಿ ವಾದಿಸಿದ್ದರು.

“ಕನ್ನಡವನ್ನು ಭಾಷೆಯಾಗಿ ಬಳಸುವ ಬದಲು ಭಾವುಕವಾಗಿ ಬಳಸುತ್ತಿದ್ದೀರಿ. ದೇವತೆಯನ್ನಾಗಿ ಮಾಡಿ, ಮಂದಹಾಸದಲ್ಲಿದ್ದಾಗ ಅದಕ್ಕೆ ಕೈ ಮುಗಿದು ಬಂದರೆ ನಮ್ಮ ಕೆಲಸ ಮುಗಿಯಿತು ಎಂಬ ಭಾವನೆಯಲ್ಲಿ ಇದ್ದೀರಿ. ಭಾಷೆಯನ್ನು ಭಾಷೆಯಾಗಿ ಪರಿಗಣಿಸಿದಾಗ ನಾನೂ ಓದಬೇಕಾಗುತ್ತದೆ, ನೀವು ಓದಬೇಕಾಗುತ್ತದೆ. ನಮ್ಮ ಮಕ್ಕಳು ಕೂಡ ಓದಬೇಕಾಗುತ್ತದೆ. ಪ್ರತಿಯೊಬ್ಬರು ಓದಬೇಕಾಗುತ್ತದೆ” ಎಂದು 2023ರ ಜನ ಸಾಹಿತ್ಯ ಸಮ್ಮೇಳನದಲ್ಲಿ ಬಾನು ಮುಷ್ತಾಕ್ ಹೇಳಿದ್ದರು.

ಇತ್ತೀಚೆಗೆ ಅವರನ್ನು ದಸರಾ ಉದ್ಘಾಟನೆಗೆ ಸರ್ಕಾರ ಆಯ್ಕೆ ಮಾಡಿದ ಬಳಿಕ ಹಳೆಯ ಭಾಷಣದ ತುಣುಕನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲಾಗಿತ್ತು. ಈ ಕುರಿತು ಆಗಸ್ಟ್ 26ರಂದು ಪ್ರತಿಕ್ರಿಯೆ ನೀಡಿದ್ದ ಬಾನು ಮುಷ್ತಾಕ್ ಅವರು, “ಹಾವೇರಿಯಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಮುಸ್ಲಿಂ ಸಾಹಿತಿಗಳನ್ನು ದೂರ ಇಟ್ಟಿದ್ದಕ್ಕೆ ಪ್ರತಿರೋಧವಾಗಿ ಜನ ಸಾಹಿತ್ಯ ಸಮ್ಮೇಳನ ಮಾಡಲಾಗಿತ್ತು. ಆ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ನಾನು ಮಹಿಳೆಯರು, ಅಲ್ಪ ಸಂಖ್ಯಾತರು ಮತ್ತು ತುಳಿತಕ್ಕೊಳಗಾದವರ ಪರ ಮಾತನಾಡಿದ್ದೆ” ಎಂದು ಸ್ಪಷ್ಟಪಡಿಸಿದ್ದರು.

ಬಾನು ಮುಷ್ತಾಕ್ ಅವರ ಜನ ಸಾಹಿತ್ಯ ಸಮ್ಮೇಳನದ ಭಾಷಣವನ್ನು ಪ್ರತಾಪ್ ಸಿಂಹ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯ ಆಯೋಜಿಸಿದ್ದ ಕೃಷಿ ಮೇಳ ಉದ್ಘಾಟಿಸಿದ ಸಿ.ಎಂ ಸಿದ್ದರಾಮಯ್ಯ

# ಕೃಷಿ ವಿ.ವಿಗಳು ರೈತಸ್ನೇಹಿ ಆಗಬೇಕು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿಕ್ರಾಂತಿ, ಹಸಿರು ಕ್ರಾಂತಿಯ ವೇಗದಲ್ಲಿ ಆಹಾರ ಉತ್ಪಾದನೆ ಆಗುತ್ತಿಲ್ಲ. ಈ ಬಗ್ಗೆ ಕೃಷಿ ವಿ.ವಿಗಳು ಹೆಚ್ಚಿನ ಅಧ್ಯಯನ ನಡೆಸಿ ಪರಿಹಾರ ಹುಡುಕಿ ರೈತಸ್ನೇಹಿ ಆಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯ ಆಯೋಜಿಸಿದ್ದ ಕೃಷಿ ಮೇಳವನ್ನು ಉದ್ಘಾಟಿಸಿ, ಶ್ರೇಷ್ಠ ಕೃಷಿಕ ಮತ್ತು ಕೃಷಿ ಮಹಿಳೆ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು.

ಸ್ವಾತಂತ್ರ್ಯದ ಹೊಸ್ತಿಲಲ್ಲಿ ಆಹಾರ ಉತ್ಪಾದನೆಯಲ್ಲಿ ಹಿಂದೆ ಇದ್ದೆವು. ಬಳಿಕ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆ ಬೆಳೆಸಿಕೊಂಡು ರಫ್ತು ಮಾಡುವುದರಲ್ಲೂ ಮುಂದೆ ಬಂದೆವು. ಆದರೆ, ಇತ್ತೀಚೆಗೆ ಆಹಾರದ ಫಲವತ್ತತೆ ಕಡಿಮೆ ಆಗುತ್ತಾ ಆಹಾರ ಉತ್ಪಾದನಾ ಪ್ರಮಾಣ ಕಡಿಮೆ ಆಗಿದೆ. ಇದನ್ನು ಕೃಷಿ ವಿವಿಗಳು ಗಂಭೀರವಾಗಿ ಪರಿಗಣಿಸಬೇಕು. ಜನಸಂಖ್ಯೆ ಬೆಳೆದ ಪ್ರಮಾಣದಲ್ಲಿ ಆಹಾರ ಉತ್ಪಾದನೆ ಆಗುತ್ತಿಲ್ಲ ಎಂದರು.




ಸಚಿವ ಸಂತೋಷ ಲಾಡ್ ಮಾತನಾಡಿ, ರಾಜ್ಯದಲ್ಲಿ ಸುಮಾರು 55 ಸಾವಿರ ಕೋಟಿಗೂ ಹೆಚ್ಚು ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ವೆಚ್ಚ ಮಾಡಿದರೂ ಸಹ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನದ ಕೊರತೆ ಇಲ್ಲ. ಸುಮಾರು 83 ಸಾವಿರ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನು ರಾಜ್ಯದಲ್ಲಿ ಕೈಗೊಳ್ಳಲಾಗುತ್ತಿದೆ. ಅಂದಾಜು 65 ಸಾವಿರ ಕೋಟಿ ರೂ.ಗಳ ಅನುದಾನವನ್ನು ಶಿಕ್ಷಣ ವಲಯಕ್ಕೆ ವೆಚ್ಚ ಮಾಡಲಾಗುತ್ತಿದೆ. ನೌಕರರ ವೇತನ ಮತ್ತು ಬಡವರಿಗೆ, ಅಂಗವಿಕಲರಿಗೆ, ವೃದ್ಧಾಪ್ಯ ವೇತನ, ಮಾಸಾಶನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಿಗೆ 1.20 ಲಕ್ಷ ಕೋಟಿ ಅನುದಾನ ವೆಚ್ಚ ಮಾಡಲಾಗುತ್ತಿದೆ ಎಂದರು.

> ಪ್ರತಿಯೊಬ್ಬರೂ ಪ್ರಗತಿಪರ ರೈತರಾಗಬೇಕು. ಕರ್ನಾಟಕದಲ್ಲಿ ಮಳೆ ಆಧಾರಿತ ಕೃಷಿ ಇದೆ. ನೀರಾವರಿ ಆಧಾರಿತ ಶೇ.40ಕ್ಕಿಂತ ಕಡಿಮೆ ಭೂಮಿ ಇದೆ. ಶೇ.60ರಷ್ಟು ಭೂಮಿ ಮಳೆ ಆಶ್ರಿತವಾಗಿದೆ. ಇಂತಹ ಭೂಮಿಗೆ ಒಗ್ಗುವ ಬೀಜ, ಬೆಳೆ ಸಂಶೋಧನೆ ಆಗಬೇಕು. ಹೊಸ ಬೀಜ, ತಂತ್ರಜ್ಞಾನ ಸಿಗಬೇಕು. ಅದನ್ನು ರೈತರಿಗೆ ತಲುಪಿಸಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆ ಆಡಳಿತ ಪಕ್ಷದ ಮುಖ್ಯ ಸಚೇತಕ ಅಶೋಕ ಪಟ್ಟಣ, ಶಾಸಕರಾದ ಎನ್.ಎಚ್. ಕೋನರಡ್ಡಿ, ಅಬ್ಬಯ್ಯ ಪ್ರಸಾದ, ವಿಜಯಾನಂದ ಕಾಶಪ್ಪನವರ, ಯಾಶೀರ ಅಹ್ಮದ ಪಠಾಣ, ಬಸವರಾಜ ಶಿವಣ್ಣನವರ, ಶ್ರೀನಿವಾಸ ಮಾನೆ, ಜಿ.ಎಸ್. ಪಾಟೀಲ, ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸೇರಿದಂತೆ ಜನಪ್ರತಿನಿಧಿಗಳು, ನಿಗಮ ಮಂಡಳಿಗಳ ಅಧ್ಯಕ್ಷರು, ಹಿರಿಯ ಅಧಿಕಾರಿಗಳು ವೇದಿಕೆಯಲ್ಲಿದ್ದರು.

ಕೃಷಿ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಪಿ.ಎಲ್. ಪಾಟೀಲ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಕೃವಿವಿಯ ವಿವಿಧ ಪ್ರಕಟಣೆಗಳನ್ನು ಬಿಡುಗಡೆ ಮಾಡಿದರು.

## ಸರ್ವಪಲ್ಲಿ ಡಾ. ರಾಧಾಕೃಷ್ಣನ್ ಸೇವೆ ಅನುಪಮ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ವಪಲ್ಲಿ ಡಾ. ರಾಧಾಕೃಷ್ಣನ್ ಅವರು ಓರ್ವ ಆದರ್ಶ ಶಿಕ್ಷಕರಾಗಿದ್ದರು. ಶಿಕ್ಷಣ ರಂಗದಲ್ಲಿ ಅವರು ಸಲ್ಲಿಸಿದ ಸೇವೆ ಅನುಪಮ ಎಂದು ಶಿಕ್ಷಕ ಎನ್.ಡಿ. ಮೇಗಲಮನಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತು ಶಿಗ್ಲಿ ಹೋಬಳಿ ಘಟಕದ ವತಿಯಿಂದ ಭಾನುವಾರ ಗ್ರಾಮದ ರಂಜನ ಪಾಟೀಲ ಅವರ ನಿವಾಸದಲ್ಲಿ ಹಮ್ಮಿಕೊಂಡಿದ್ದ ಮನೆ ಮನೆಯಲ್ಲಿ ಸಾಹಿತ್ಯ ಕಾರ್ಯಕ್ರಮದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಕುರಿತು ಉಪನ್ಯಾಸ ನೀಡಿದರು.


ಕಸಾಪ ಹೋಬಳಿ ಘಟಕದ ಗೌರವಾಧ್ಯಕ್ಷ ಪ್ರವೀಣ ಹುಲಗೂರ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನ ಶಿಗ್ಲಿ ಹೋಬಳಿ ಘಟಕದ ವತಿಯಿಂದ ಈವರೆಗೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಸಾಹಿತ್ಯಕ್ಕೆ ಸಂಬಂಧಿಸಿದಂತೆ ಮತ್ತಷ್ಟು ಕಾರ್ಯಕ್ರಮಗಳನ್ನು ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ತಾ.ಪಂ ಮಾಜಿ ಸದಸ್ಯ ರಾಜರತ್ನ ಹುಲಗೂರ, ಸೋಮಣ್ಣ ಡಾಣಗಲ್ಲ, ರಂಜನ್ ಪಾಟೀಲ, ಶಿವಾನಂದ ಮೂಲಿಮನಿ, ಈರಣ್ಣ ಅಳ್ಳಳ್ಳಿ, ಶಿಕ್ಷಕರಾದ ಅರಳಿ, ಗೋಣೆಪ್ಪನವರ, ಮಡಿವಾಳ, ವಿರಕ್ತಮಠ, ಬಡಿಗೇರ, ಶಿಕ್ಷಿ ಸಾಲಿಮಠ, ಅಮರೇಶ್ವರ ಹುಲಗೂರ, ಮಂಜುನಾಥ ಶಂಭೋಜಿ, ಈರಣ್ಣ ಅಕ್ಕೂರ ಇದ್ದರು.

## ಪಂ. ಪುಟ್ಟರಾಜರ 15ನೇ ಪುಣ್ಯಾರಾಧನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗಾನ ಗಂಧರ್ವ ಕಲಾ ಟ್ರಸ್ಟ್ ಗದಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ವತಿಯಿಂದ ಸೆ.17ರಂದು ಸಂಜೆ 6 ಗಂಟೆಗೆ ವಿವೇಕಾನಂದ ಬಡಾವಣೆಯ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ಪದ್ಮಭೂಷಣ, ಪಂ. ಪುಟ್ಟರಾಜ ಗವಾಯಿಗಳವರ 15ನೇ ಪುಣ್ಯಾರಾಧನೆ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ 2ನೇ ವರ್ಷದ ವಾರ್ಷಿಕೋತ್ಸವದ ನಡೆಯಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹಠಯೋಗಿ ಕೊಟ್ಟೂರೇಶ್ವರ ಮಠದ ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ವಹಿಸುವರು. ಮುಂಡರಗಿ ಬ್ರಹನ್ಮಠದ ಡಾ. ವೀರೇಶ್ವರ ಶರಣರ ಸಮ್ಮುಖದಲ್ಲಿ



ಗಾನ ಗಂಧರ್ವ ಕಲಾ ಟ್ರಸ್ಟ್ ಅಧ್ಯಕ್ಷ ಬಿ.ಎಂ. ಪಂಚಾಕ್ಷರಿ ಅಧ್ಯಕ್ಷತೆ ವಹಿಸುವರು. ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪಿಎಸ್ಐ ಮಾರುತಿ ಎಸ್.ಜೋಗದಂಡಕರ ಕಾರ್ಯಕ್ರಮ ಉದ್ಘಾಟಿಸುವರು.

ಅತಿಥಿಗಗಳಾಗಿ ಡಾ. ಬಸವರಾಜ ಬಳ್ಳಾರಿ, ಗಣ್ಯ ವರ್ತಕ ಶರಣಪ್ಪ ಸಂಗಪ್ಪ ಗುಡಿಮನಿ, ನವರತ್ನ ಜ್ಯೂವೆಲರ್ಸ್ ಮಾಲೀಕ ಸಿದ್ದಲಿಂಗೇಶ ಮುರಶಿಳ್ಳಿನ ಆಗಮಿಸುವರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಉಮೇಶ ಸಿ.ಕಪ್ಪತ್ತನವರ, ಧ್ರುವಕುಮಾರ ಬಸಪ್ಪ ಮೆಣಸಿನಕಾಯಿ, ಅಂಬಾದಾಸ ಜಮಾದಾರರಿಗೆ ಸನ್ಮಾನ ನಡೆಯಲಿದೆ.

ಪುಟ್ಟರಾಜೇಶ ಗುತ್ತರಗಿ ಪುಣೆಯವರಿಂದ ತಬಲಾ ಹಾಗೂ ಹಾರ್ಮೋನಿಯಂ ಸೇವೆಯೊಂದಿಗೆ ಹರ್ಷತ್ ಕುಮಾರ್ ಸ್ವರನಮನ ಕಾರ್ಯಕ್ರಮ ನಡೆಸಿಕೊಡುವರು. ಹರ್ಷತ್ ಕುಮಾರ್ ಎಂ.ಕಲಕಂಬಿ ಭರತನಾಟ್ಯ, ನಾದಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ಹಾಡು, ನೃತ್ಯಗಳ ಪ್ರದರ್ಶನ ನಡೆಯಲಿದೆ ಎಂದು ಗಾನ ಗಂಧರ್ವ ಕಲಾ ಟ್ರಸ್ಟ್ ಕಾರ್ಯದರ್ಶಿ ಸಿದ್ದಲಿಂಗಯ್ಯ ಶಾಸ್ತ್ರೀ ಎಸ್.ಗಡ್ಡದಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಲಯ ವಾಲಿಬಾಲ್ ಪಂದ್ಯಾವಳಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪಂದ್ಯದಲ್ಲಿ ಗೆಲುವನ್ನು ಸಾಧಿಸಲು ಆಟಗಾರನಿಗೆ ತಾಳ್ಮೆ ಇರಬೇಕು. ಜೀವನ ಮತ್ತು ಆರೋಗ್ಯದ ಸುಧಾರಣೆಗೆ ಕ್ರೀಡೆಗಳು, ವ್ಯಾಯಾಮ ಹಾಗೂ ನಿರಂತರ ಚಟುವಟಿಕೆಗಳು ಬಹಳ ಮುಖ್ಯ ಎಂದು ಯುವ ಮುಖಂಡ ಸಚಿನ್ ಪಾಟೀಲ ಹೇಳಿದರು.

ನಗರದ ಕಳಸಾಪುರ ರಸ್ತೆಯ ಒಳಾಂಗಣ ಕ್ರೀಡಾಂಗಣದಲ್ಲಿ ವಾಯುವಿಹಾರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ವಲಯ ವಾಲಿಬಾಲ್ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾಯು ವಿಹಾರ ಸಂಘದ ಅಧ್ಯಕ್ಷ ರಮೇಶ ಹೊನ್ನಿನಾಯ್ಕರ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಸಂಘಟನೆ ಆರಂಭದಿಂದಲೂ ವಿವಿಧ ರೀತಿಯಲ್ಲಿ ಕ್ರೀಡೆಗಳನ್ನು ಆಯೋಜಿಸುತ್ತಾ ಬಂದಿದೆ. ಅದೇ ರೀತಿ ಮುಂದಿನ ದಿನಗಳಲ್ಲಿ ನಮ್ಮ ಸಂಘದಿಂದ ಕ್ರೀಡಾಪಟುಗಳಿಗೆ ಸಹಾಯ–ಸಹಕಾರ ನೀಡಿ ರಾಜ್ಯ, ದೇಶಕ್ಕೆ ಕ್ರೀಡೆಯಲ್ಲಿ ಪದಕ ತರುವ ಕಾರ್ಯದಲ್ಲಿ ಸಹಾಯ ಮಾಡಲು ಯೋಚಿಸಿದ್ದೇವೆ ಎಂದು ತಿಳಿಸಿದರು.

ಮುಖಂಡರಾದ ಎಸ್.ಕೆ. ಮ್ಯಾಗೇರಿ, ತಂಡದ ಮಾಲೀಕರಾದ ಚನ್ನಪ್ಪ ಜಿನಾಗ, ಪ್ರಕಾಶ ಸಿದ್ದಲಿಂಗ, ಶರತ್ ಚಂದ್ರ ಭಾಗವಹಿಸಿದ್ದರು. ಸಭೆಯಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಸೋಮು ಲಮಾಣಿ ವಿಜೇತ ತಂಡಗಳಿಗೆ ಬಹುಮಾನ ರೂಪದಲ್ಲಿ ಹಣವನ್ನು ನೀಡಿದರು. ವಿನಾಯಕ ಪವಾರ, ಬಸವರಾಜ ಸಿರುಗುಂಪಿ, ಕೆ.ವೈ. ವಿಭೂತಿ, ಈರಣ್ಣ ಬಳಗೇರ, ಡಾ. ಬಸವರಾಜ, ಮಲ್ಲೇಶ ಮುಧೋಳ, ಸಂತೋಷ ಮುಧೋಳ ನೇತೃತ್ವದ ತಂಡ ಪ್ರಥಮ ಬಹುಮಾನವನ್ನು ಪಡೆಯಿತು. ಶಿವಣ್ಣ ಗುಜಮಾಗಡಿ, ಯಚರಪ್ಪ ಸಜ್ಜನ, ವಿ.ಎ. ಸಜ್ಜನ, ಆನಂದ ಮುಧೋಳ, ಉಮೇಶ ಮುಧೋಳ ನೇತೃತ್ವದ ತಂಡ ದ್ವಿತೀಯ ಹಾಗೂ ಇಕ್ಬಾಲ್ ಮುಲ್ಲಾ, ಹುಚ್ಚಪ್ಪ ಶಿರಹಟ್ಟಿ, ಫಕ್ರುದ್ದೀನ್, ಬಸಣ್ಣ ಮುಧೋಳ ಹಾಗೂ ರಾಜು ಕತ್ತಿ ಒಳಗೊಂಡ ತಂಡವು ತೃತೀಯ ಬಹುಮಾನ ಪಡೆಯಿತು.

ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಣಾಧಿಕಾರಿ ವಿ.ಎ. ಸಜ್ಜನ ನಿರೂಪಿಸಿದರು. ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ ವಂದಿಸಿದರು.

## ತರಬೇತಿ, ಪ್ರಮಾಣಪತ್ರ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕದ ಆಶ್ರಯದಲ್ಲಿ ಭಾರತ ಸರಕಾರದ ಮಿನಿಸ್ಟರಿ ಆಫ್ ಟೆಕ್ಸ್‌ಟೈಲ್ ಇವರ ಸಹಯೋಗದಲ್ಲಿ ಬಿಎ/ಬಿಕಾಂ/ಬಿಎಸ್ಸಿ ವಿದ್ಯಾರ್ಥಿಗಳಿಗೆ ನಡೆದ ಕರಕುಶಲ ಪ್ರದರ್ಶನ ಮತ್ತು ಜಾಗೃತಿ ಅಭಿಯಾನದ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದಲ್ಲಿ ಅತಿಥಿಗಳಾಗಿ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಅಮರೇಶ ಅಂಗಡಿ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾಥಿಗಳು ಭವಿಷ್ಯದಲ್ಲಿ ಸ್ವಯಂ ಉದ್ಯೋಗ ಮಾಡಲು ಬೇಕಾದ ಉತ್ತಮ ಜ್ಞಾನ ಮತ್ತು ತರಬೇತಿ ದೊರೆಯುವ ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.

ವೇದಿಕೆಯ ಮೇಲೆ ರಾಜೇಶ್ವರಿ ಕೆ.ಎಂ, ಪಾರ್ವತಿ ತಳವಾರ, ಸುಮಾ ಕೆ.ಗುಡದಳ್ಳಿ, ಮೈಲಾರಪ್ಪ ಆರ್. ಗಂಗಾಧರ, ಶಿವರಾಮ ನಾಯಕ, ಪೃಥ್ವಿರಾಜ ವಾಲ್ಮಿಕಿ ಮತ್ತು ಸಂತೋಷ ನಾಯಕ ಉಪಸ್ಥಿತರಿದ್ದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾ. ಎಂ.ಎಂ. ಬುರಡಿ ವಹಿಸಿದ್ದರು. ಪ್ರೊ. ಆನಂದ ದೇಸಾಯಿಪಟ್ಟಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

## ಇಂಜಿನಿಯರಿಂಗ್ ಕ್ಷೇತ್ರದಲ್ಲಿ ವಿಫುಲ ಅವಕಾಶಗಳಿವೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ಸೋಮವಾರ ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯನವರ ಜನ್ಮದಿನಾಚರಣೆ ಅಂಗವಾಗಿ ಇಂಜಿನಿಯರ್ಸ್ ಡೇ ಆಚರಿಸಲಾಯಿತು.

ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಪರುಶುರಾಮ್ ಬಾರಕಿ ಮಾತನಾಡಿ, ಸರ್ ಎಂವ್ಹಿ ಅವರ ಬದುಕು ಮತ್ತು ಸಾಧನೆ ಯುವ ಪೀಳಿಗೆಗೆ ಆದರ್ಶವಾಗಿದೆ. ಇಂದಿನ ಸಮಾಜದಲ್ಲಿ ವಿಶ್ವೇಶ್ವರಯ್ಯ ಅವರ ಪ್ರಾಮಾಣಿಕ, ನಿಸ್ವಾರ್ಥ ಸೇವೆ ನಮಗೆಲ್ಲ ದಾರಿದೀಪವಾಗಬಲ್ಲದು. ಇಂದು ಇಂಜಿನಿಯರಿಂಗ್ ಕ್ಷೇತ್ರದಲ್ಲಿ ವಿಫುಲವಾದ ಅವಕಾಶಗಳಿದ್ದು ಯುವ ಇಂಜಿನಿಯರ್‌ಗಳು ತಮ್ಮ ಶಿಕ್ಷಣದ ನಂತರ ವೈಯಕ್ತಿಕ ಹಿತಾಭಿವೃದ್ಧಿಯ ಜೊತೆಗೆ ಸಮಾಜಮುಖಿ ಕಾರ್ಯಗಳಲ್ಲಿ ತಮ್ಮ ಪ್ರತಿಭೆ ಮೆರೆಯಬೇಕು ಎಂದರು.

ಚಂದನದ ವಿದ್ಯಾರ್ಥಿಗಳು ಚಂದನ–ಸ್ಪಂದನದಲ್ಲಿ ಇಂಜಿನಿಯರ್‌ಗಳ ಪ್ರಮುಖ ಗುರಿಗಳು, ವೃತ್ತಿ ಜೀವನದ ಕೌಶಲ್ಯಗಳು, ಉತ್ತಮ ಇಂಜಿನಿಯರ್ ಆಗಲು ಬಯಸುವ ವಿದ್ಯಾರ್ಥಿಗಳಿಗೆ ಸಲಹೆ, ಇತ್ತೀಚಿನ ದಿನಮಾನಗಳಲ್ಲಿ ಇಂಜಿನಿಯರ್‌ರ ಕೊಡುಗೆ ಮತ್ತು ಎಲೆಕ್ಟ್ರಾನಿಕ್ಸ್–ತಂತ್ರಜ್ಞಾನದ ಬಗ್ಗೆ ಪ್ರಶ್ನೆ ಕೇಳಿ ಮಾಹಿತಿ ಪಡೆದರು.

ಚಂದನ ಶಾಲೆಯ ಸಂಸ್ಥಾಪಕ ಟಿ. ಈಶ್ವರ ಮಾತನಾಡಿ, ಸರ್ ಮೋಕ್ಷಗುಂಡಂ ವಿಶ್ವೇಶ್ವರಯ್ಯನವರ ಕೊಡುಗೆಗಳನ್ನು ಶ್ಲಾಘಿಸಲು ದೇಶವು ಪ್ರತಿ ವರ್ಷ ಸೆಪ್ಟೆಂಬರ್ 15ನ್ನು ರಾಷ್ಟ್ರೀಯ ಇಂಜಿನಿಯರ್ ದಿನವಾಗಿ ಆಚರಿಸುತ್ತದೆ. ವಿಶ್ವೇಶ್ವರಯ್ಯನವರ ಕೊಡುಗೆ ದೇಶಕ್ಕೆ ಅತ್ಯಮೂಲ್ಯವಾಗಿದ್ದು, ವಿದ್ಯಾರ್ಥಿಗಳು ಸರ್ ಎಂವ್ಹಿ ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಅಗಡಿ ಕಾಲೇಜಿನ ಪ್ರೊ. ಡಾ. ರಾಜೇಶ ಪಾಟೀಲ, ನಿರ್ದೇಶಕ ಎಚ್.ಸಿ. ರಟಗೇರಿ, ಪ್ರಾಂಶುಪಾಲ ಆರ್.ಜಿ. ಬಾವನವರ, ಶಿಕ್ಷಕರು, ವಿದ್ಯಾರ್ಥಿಗಳು, ಸಿಬ್ಬಂದಿಗಳು ಇದ್ದರು. ವಿದ್ಯಾರ್ಥಿಗಳಾದ ಸೃಷ್ಟಿ, ಗಂಗಾಧರ, ವಚನ, ವರ್ಷಾ ನಿರೂಪಿಸಿದರು.

# ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ಬಲಿಷ್ಠವಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಜಾಪ್ರಭುತ್ವವನ್ನು ಬಲಪಡಿಸಲು, ಅದರ ಮೌಲ್ಯಗಳು ಮತ್ತು ತತ್ವಗಳನ್ನು ಎತ್ತಿ ಹಿಡಿಯಲು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ಬಹಳ ದೊಡ್ಡದಿದ್ದು, ಅಷ್ಟೇ ಬಲಿಷ್ಠವಾಗಿದೆ ಎಂದು ತಹಸೀಲ್ದಾರ ಧನಂಜಯ ಎಂ ಹೇಳಿದರು.

ಅವರು ಪಟ್ಟಣದ ತಹಸೀಲ್ದಾರರ ಕಚೇರಿಯಲ್ಲಿ ಸೋಮವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಭಾರತದಲ್ಲಿ, ಸಂಸತ್ತು ಅಥವಾ ನ್ಯಾಯಾಂಗವಲ್ಲದ ಸಂವಿಧಾನವೇ ಸರ್ವೋಚ್ಚವಾಗಿದೆ. ಭಾರತವು ಲಿಖಿತ ಸಂವಿಧಾನವನ್ನು ಹೊಂದಿದೆ. ಇದರಲ್ಲಿ ನಾಗರಿಕರ ಹಕ್ಕುಗಳು, ಸ್ವಾತಂತ್ರ್ಯಗಳು ಮತ್ತು ಕರ್ತವ್ಯಗಳನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಲಾಗಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಮ್ಮ ಕ್ಷೇತ್ರದಲ್ಲಿ ಅಭೂತಪೂರ್ವ ಯಶಸ್ಸು ಕಂಡಿದೆ. ಇದಕ್ಕೆ ಶ್ರಮಿಸಿದ ಸರ್ವರಿಗೂ ಧನ್ಯವಾದಗಳನ್ನು ಅರ್ಪಿಸುವದಾಗಿ ಹೇಳಿದರು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಇಡೀ ದೇಶದ ಜನತೆ ಒಪ್ಪಿಕೊಂಡಿರುವ ಸಂವಿಧಾನದ ಪ್ರಕಾರ ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಯಲ್ಲಿದೆ. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರಜೆಗಳಿಗೆ ಹೆಚ್ಚಿನ ಮನ್ನಣೆ ಇದೆ. ಇದನ್ನೇ ಸಂವಿಧಾನ ಒತ್ತಿ ಹೇಳುತ್ತದೆ. ಸ್ವಾತಂತ್ರ್ಯ, ಸಮಾನತೆ, ಸಹೋದರತೆಯನ್ನು ಪ್ರಜಾಪ್ರಭುತ್ವ ವ್ಯವಸ್ಥೆ ಬಿಂಬಿಸುತ್ತದೆ. ಕಾರಣ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗೌರವಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಫಕ್ಕೀರೇಶ ಭಜಕ್ಕನವರ ಮಾತನಾಡಿದರು. ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಅಧೀಕ್ಷಕ ಮುತ್ತಣ್ಣ ಸಂಕನೂರ, ವಾರ್ಡನಗಳಾದ ಬಿ.ಎಸ್. ಹಡಪದ, ಕೆ.ಎಫ್. ತಳವಾರ, ಫಕ್ಕೀರೇಶ ನಂದೆಣ್ಣವರ, ಅನಿಲ ಮುಳಗುಂದ, ಅಂಬರೀಶ ತೆಂಬದಮನಿ, ತಾಲೂಕು ಮಟ್ಟದ ಅಧಿಕಾರಿಗಳು, ತಹಸೀಲ್ದಾರ ಕಚೇರಿ ಸಿಬ್ಬಂದಿಗಳು ಇದ್ದರು.




## ಪ್ರಜಾಪ್ರಭುತ್ವ ದಿನಾಚರಣೆಯ ಪ್ರಯುಕ್ತ ಚಿತ್ರಕಲಾ ಪ್ರದರ್ಶನ

▶▶ ಮೊದಲನೇ ಪುಟದಿಂದ

ಚಿತ್ರಗಳು ಆಕರ್ಷಣೀಯವಾಗಿದ್ದವು.

ಈ ಸಂದರ್ಭದಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಎಸ್.ಎನ್. ಬಳ್ಳಾರಿ ಸೇರಿದಂತೆ ಗಣ್ಯರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.




ಗದಗ-ಬೆಟಗೇರಿ ಅಂಜುಮನ್ ಸಂಸ್ಥೆಯ ಚುನಾವಣೆಗೆ ಸ್ಪರ್ಧಿಸಲು ನಗರದ ತಾಜ್‌ನಗರ ನಿವಾಸಿ ರಿಯಾಝ್ ಅಹ್ಮದ್ ನಾನಾಸಾಬ್ ದೊಡ್ಡಮನಿ, ಇನ್ನೋರ್ವ ಅಭ್ಯರ್ಥಿ ಕುತುಬುದ್ದಿನ್ ಮೀರಾಸಾಬ ಶೇಖ ಸ್ವತಂತ್ರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಉಮರಫರೂಕ್ ಹುಬ್ಬಳ್ಳಿ, ಜುನೇದ್ ಎಚ್.ಉಮಚಗಿ, ಮಾಬುಸಾಬ್ ಹುಲ್ಲೂರ, ಅಬೀದ್ ಹುಸೇನ್ ಸುಂಕದ, ಅಬ್ದುಲ್ ಹಫೀಜ್ ಉಮಚಗಿ, ಅಬ್ದುಲ್ ರಶೀದ್ ಕುರ್ತಕೋಟಿ ಉಪಸ್ಥಿತರಿದ್ದರು.

### ಅಂಜುಮನ್-ಏ-ಇಸ್ಲಾಂ ಕಮಿಟಿ ವತಿಯಿಂದ ಉಚಿತ ಸಾಮೂಹಿಕ ವಿವಾಹ

# ನವ ಜೋಡಿಗಳು ಸಾರ್ಥಕ ಜೀವನ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ದಾಂಪತ್ಯ ಜೀವನಕ್ಕೆ ಕಾಲಿಟ್ಟ ನವ ಜೋಡಿಗಳು ಪರಸ್ಪರ ಒಬ್ಬರನ್ನೊಬ್ಬರು ಅರ್ಥ ಮಾಡಿಕೊಂಡು ಜೀವನ ಸಾಗಿಸುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಹಜರತ್ ಹಫೀಜ್ ಸೈಯದ್ ಮಹಮ್ಮದಅಲಿ ಅಲ್-ಹುಸೇನಿಸಾಹೇಬ ಹೇಳಿದರು.

ಪಟ್ಟಣದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಕಲಾ ಭವನದಲ್ಲಿ ಭಾನುವಾರ ಅಂಜುಮನ್-ಏ-ಇಸ್ಲಾಂ ಕಮಿಟಿ ವತಿಯಿಂದ ಪ್ರವಾದಿ ಹಜರತ ಮುಹಮ್ಮದ ಪೈಗಂಬರ ರಸೂಲಲ್ಲಾ ಅವರ 1500ನೇ ಜಯಂತ್ಯುತ್ಸವದ ಅಂಗವಾಗಿ ಪ್ರಥಮ ಬಾರಿಗೆ ನಡೆದ ಇಸ್ಲಾಂ ಧರ್ಮದ ಉಚಿತ ಸಾಮೂಹಿಕ ವಿವಾಹಗಳ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ



ಅವರು ಮಾತನಾಡಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಸಾಮಾಜಿಕ ಸಮನ್ವಯ, ದೇಶದ ಬೆಳವಣಿಗೆಗೆ ಹಿಂದೂ-ಮುಸ್ಲಿಮರು ಐಕ್ಯತೆಯಿಂದ ಇರಬೇಕು. ಮನಸು ಒಡೆಯುವವರಿಂದ ದೂರ ಇದ್ದು, ಮನಸ್ಸು ಕೂಡಿಸುವರೊಂದಿಗೆ ಸೇರಿ ನಿಮ್ಮ ನವ ಜೀವನವನ್ನು ಸುಂದರವಾಗಿಸಿಕೊಳ್ಳಬೇಕು ಎಂದರು.

ಸಾಮೂಹಿಕ ವಿವಾಹದಲ್ಲಿ ಮದುವೆಯಾಗುವುದರಿಂದ ಆರ್ಥಿಕ ಹೊರೆ ತಡೆಯಬಹುದು. ಆರ್ಥಿಕವಾಗಿ ಸಂಕಷ್ಟ ಎದುರಿಸುತ್ತಿರುವ ಕುಟುಂಬಗಳಿಗೆ ಸಾಮೂಹಿಕ ವಿವಾಹ ಸಹಕಾರಿಯಾಗಿದೆ. ಈ ಉತ್ತಮ ಸಾಮಾಜಿಕ ಕಾರ್ಯವನ್ನು ಮಾಡಿದ ಅಂಜುಮನ್-ಏ-ಇಸ್ಲಾಂ ಕಮಿಟಿ ಪದಾಧಿಕಾರಿಗಳಿಗೆ ಅಭಿನಂದನೆಗಳನ್ನು ತಿಳಿಸಿದರು.

ಸಮ್ಮುಖ ವಹಿಸಿದ್ದ ಸಜ್ಜಾದಾ ನಸೀನ ನೀಲಂಗಾ ಶರೀಫ ಮಹಾರಾಷ್ಟ್ರದ ಹಜರತ್ ಸೈಯದಶಾ ಹೈದರವಲಿ ನಬೀರಾ ಖಾದ್ರಿ ಮಾತನಾಡಿ, ಇದು ಭಾರತೀಯ ಸಂಸ್ಕೃತಿ, ಸಂಪ್ರದಾಯ. ಸೌಹಾರ್ದತೆಯಿಂದ ಈ ಅರ್ಥಪೂರ್ಣ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸ್ವಾಗತಾರ್ಹವಾಗಿದೆ ಎಂದರು.

ಹೊಸಳ್ಳಿ ಬೂದೀಶ್ವರ ಮಠದ ಅಭಿನವ ಬೂದೀಶ್ವರ ಶ್ರೀಗಳು ಮಾತನಾಡಿ, ಮನುಷ್ಯ, ಮನುಷ್ಯನನ್ನು ಪ್ರೀತಿಸಬೇಕು. ಮನುಷ್ಯನಲ್ಲಿ ಮೊದಲು ಮನುಷ್ಯತ್ವ ಮುಖ್ಯವಾಗಿರಬೇಕು. ಎಲ್ಲ ಧರ್ಮಗಳು ಹೇಳಿದಂತೆ, ನಿನ್ನನ್ನು ನೀ ಹೇಗೆ ಪ್ರೀತಿಸುತ್ತೀಯೋ, ಅದೇ ರೀತಿ ಪರಸ್ಪರರನ್ನು ಪ್ರೀತಿಯಿಂದ ಕಂಡು ಪ್ರೀತಿ ವಿಶ್ವಾಸ ಸ್ನೇಹದಿಂದ ಬದುಕಬೇಕು. ಸ್ವಾರ್ಥವನ್ನ ಬಿಟ್ಟು ಸಾರ್ಥಕತೆಯ ಜೀವನ ನಡೆಸಬೇಕು. ಈ ಎಲ್ಲ ಗುಣಗಳನ್ನ ನವ ವಧು-ವರರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸುಂದರ ಜೀವನ ನಡೆಸಬೇಕು ಎಂದರು.

ಧಾರವಾಡ ಮುರುಘಾಮಠ, ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ಅನಗತ್ಯ ಆರ್ಥಿಕ ಅಪಮೌಲ್ಯ ತಡೆದು ಸಾಮಾಜಿಕ ಜೀವನಕ್ಕೆ ಸಹಕಾರ ನೀಡುವ ಸಾಮೂಹಿಕ ವಿವಾಹ ಯೋಜನೆ ಇತರರಿಗೂ ಮಾದರಿಯಾಗಬೇಕು. ಪರರಿಗೆ ಉಪಕಾರ ಮಾಡಬೇಕು ಎಂದರು. ಅಧ್ಯಕ್ಷತೆಯನ್ನ ಅಂಜುಮನ್-ಏ-ಇಸ್ಲಾಂ ಕಮಿಟಿ ಅಧ್ಯಕ್ಷ ತಾಜುದ್ದೀನ ಕಿಂಡ್ರಿ ವಹಿಸಿದ್ದರು. ಮಾಜಿ ಸಂಸದ ಐ.ಜಿ. ಸನದಿ, ಜನಾಬ ಮಹಮ್ಮದ ಇಸ್ಮಾಯಿಲ್ ಖಾಜಿ, ಮುಖಂಡರಾದ ಶಿವಣ್ಣ ನೀಲಗುಂದ, ಎಂ.ಡಿ. ಬಟ್ಟೂರ, ಗುರಣ್ಣ ಬಳಗಾನೂರ, ಹುಮಾಯನ್ ಮಾಗಡಿ, ಬಸವರಾಜ ಸುಂಕಾಪುರ, ರಾಮಣ್ಣ ಕಮಾಜಿ, ಸೇರಿದಂತೆ ಸೈಯ್ಯದಲಿ ಶೇಖ, ಸೇರಿದಂತೆ ಕಮಿಟಿ ಪದಾಧಿಕಾರಿಗಳು ಹಾಗೂ ಗುರು-ಹಿರಿಯರು ಇದ್ದರು.

## ಭಾರತದ ಪ್ರಜಾಪ್ರಭುತ್ವ ವಿಶ್ವದಲ್ಲಿಯೇ ಶ್ರೇಷ್ಠ

▶▶ ಮೊದಲನೇ ಪುಟದಿಂದ



ಹೋಗಿದ್ದರೆ ಕೆಳವರ್ಗದ ಪ್ರಜೆಗಳು ಸಮಾಜ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿರಲಿಲ್ಲ. ಪ್ರಜಾಪ್ರಭುತ್ವದ ಕುರಿತು ಇನ್ನೂ ಹೆಚ್ಚು ಅರಿವು ಮೂಡಿಸುವ ಕಾರ್ಯವು ಜಿಲ್ಲೆಯ ಪ್ರತಿ ಗ್ರಾಮದಲ್ಲಿ ಆಗಬೇಕಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸಂವಿಧಾನ ಪ್ರಸ್ತಾವನೆಯನ್ನು ಬೋಧಿಸಿದರು. ಇದೇ ಸಂದರ್ಭದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಪ್ರಯುಕ್ತ ಜಿಲ್ಲಾ ಮಟ್ಟದ ಚಿತ್ರಕಲೆ, ಭಾಷಣ ಸ್ಪರ್ಧೆ, ಪ್ರಬಂಧ ಸ್ಪರ್ಧೆಗೆ ವಿಧ್ಯುಕ್ತವಾಗಿ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಎಸ್.ಎನ್. ಬಳ್ಳಾರಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಗಣ್ಯರು, ಸಿಬ್ಬಂದಿಗಳು ಹಾಜರಿದ್ದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ನಾಡಗೀತೆ ಪ್ರಸ್ತುತಪಡಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸ್ವಾಗತಿಸಿದರು. ವೀರಯ್ಯ ಹೊಸಮಠ ಕಾರ್ಯಕ್ರಮ ನಿರೂಪಿಸಿದರು. ಎಚ್.ಆರ್. ಸಕ್ರಿ ವಂದಿಸಿದರು.

## ಸಿದ್ದರಾಮಯ್ಯ ನಡೆಯಿಂದ ಶೋಷಿತ ಸಮುದಾಯಗಳಿಗೆ ಅನ್ಯಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಶೋಷಿತ ಸಮುದಾಯಗಳಲ್ಲಿ ಇತರ ಜಾತಿ ಹಾಗೂ ಧರ್ಮಗಳನ್ನು ಸೇರಿಸಿ ಶೋಷಿತ ಸಮುದಾಯಗಳಿಗೆ ಅನ್ಯಾಯವೆಸಗುತ್ತಿರುವ ರಾಜ್ಯ ಸರ್ಕಾರದ ನಡೆ ಖಂಡನೀಯವೆಂದು ಗದಗ ಜಿಲ್ಲಾ ವಾಲ್ಮೀಕಿ ಯುವ ಮುಖಂಡ ಪ್ರಶಾಂತ ನಾಯ್ಕರ ಹೇಳಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಾವಿರಾರು ವರ್ಷಗಳ ಕಾಲ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ತುಳಿತಕ್ಕೊಳಗಾದ ಎಸ್‌ಟಿ ಸಮುದಾಯಗಳಲ್ಲಿ



ಮತ್ತೊಂದು ಜಾತಿಯನ್ನು ಸೇರಿಸಿ ಶೋಷಿತ ಸಮುದಾಯದ ಪಾಲನ್ನು ಕಿತ್ತುಕೊಂಡು ನೈಜ ದಲಿತ ಸಮುದಾಯಕ್ಕೆ ಅನ್ಯಾಯವೆಸಗುತ್ತಿರುವ ಮುಖ್ಯಮಂತ್ರಿಗಳ ನಡೆ ದಲಿತ ವಿರೋಧಿ ನೀತಿಗೆ ಹಿಡಿದ ಕೈಗನ್ನಡಿಯಾಗಿದೆ. ಎಸ್‌ಟಿ ಸಮುದಾಯವನ್ನು ಸಮಾಜದ ಅಂಚಿಗೆ ತಳ್ಳುವ ವ್ಯವಸ್ಥಿತ ಷಡ್ಯಂತ್ರ್ಯವನ್ನು ರಾಜ್ಯ ಸರ್ಕಾರ ಮಾಡುತ್ತಿರುವದು ದುರಂತದ ಸಂಗತಿ.

ಕೂಡಲೇ ಮುಖ್ಯಮಂತ್ರಿಗಳು ತಮ್ಮ ದಲಿತ ವಿರೋಧಿ ನೀತಿಯನ್ನ ಕೈಬಿಡಬೇಕು. ಎಸ್‌ಟಿ ಸಮುದಾಯದಲ್ಲಿ ಇತರೇ ಜಾತಿಯನ್ನ ಸೇರಿಸದೇ ಇರುವ ಮೀಸಲಾತಿಯ ಲಾಭ ಶೋಷಿತ ಸಮುದಾಯಕ್ಕೆ ತಲುಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

### ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ದತ್ತು ಶಾಲೆ ಕಾರ್ಯಕ್ರಮ

# ಸರ್ಕಾರಿ ಶಾಲೆಗಳ ಸಬಲೀಕರಣ ಕಾರ್ಯ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಂದು ಮಗುವಿಗೂ ಸುಂದರವಾದ ಜೀವನ ಅವಶ್ಯಕ. ಕೆಲವು ಮಕ್ಕಳು ಕೆಲವು ನ್ಯೂನತೆಗಳ ಕಾರಣದಿಂದ ದಿವ್ಯಾಂಗ ಮಕ್ಕಳು ಎಂದು ಗುರುತಿಸಿಕೊಳ್ಳುತ್ತಾರೆ. ಅವರ ವಯಸ್ಸು ಮತ್ತು ನ್ಯೂನತೆಗಳ ಅನುಗುಣವಾಗಿ ಅವರಿಗೆ ಸೂಕ್ತವಾದ ಚಿಕಿತ್ಸೆ ಹಾಗೂ ಮಾರ್ಗದರ್ಶನ ದೊರೆಯುವುದು ಅವಶ್ಯಕ ಎಂದು ಗದಗ ಶಹರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ದತ್ತು ಶಾಲೆಗಳಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದಿವ್ಯಾಂಗ ಮಕ್ಕಳಿಗೆ ಸಿಗಬಹುದಾದ ಸವಲತ್ತುಗಳ ಬಗ್ಗೆ ವಿವರಿಸಿ, ಇಂತಹ ಮಕ್ಕಳ ಚಿಕಿತ್ಸೆಗಾಗಿ ನಮ್ಮ ಕರ್ನಾಟಕದಲ್ಲಿರುವ ವಿಶೇಷ ವೈದ್ಯಕೀಯ ಆಸ್ಪತ್ರೆಗಳು ಮತ್ತು ಅದರ ಮಾಹಿತಿಯನ್ನು ನೀಡಿದರು.



ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷೆ ಅಶ್ವಿನಿ ಜಗತಾಪ್ ಮಾತನಾಡಿ, ವಿಶೇಷ ಮಕ್ಕಳು ಸಾಮಾನ್ಯರಂತೆ ಬದುಕನ್ನು ನಡೆಸುವಲ್ಲಿ ನಮ್ಮಿಂದ ಆಗಬಹುದಾದ ಸಹಾಯ ಮಾಡೋಣ ಎಂದರು.

ಕ್ಲಬ್‌ನ ಹಿರಿಯರಾದ ರಾಜೇಶ್ವರಿ ಬಳ್ಳಾರಿ ಮಾತನಾಡಿ, ನಮ್ಮ ಸಂಸ್ಥೆಯ ವತಿಯಿಂದ ವಿಶೇಷವಾಗಿರುವ ಶೈಕ್ಷಣಿಕ ಕಾರ್ಯಗಳಲ್ಲಿ ಶಾಲೆಗಳನ್ನು ದತ್ತು ಪಡೆದು ಅವುಗಳಲ್ಲಿ ಅವಶ್ಯಕವಾಗಿರುವ ಮೂಲಭೂತ ಸೌಲಭ್ಯಗಳನ್ನು ಪೂರೈಸುವುದು ನಮ್ಮ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ವಿಶೇಷ ಚೇತನ ಮಕ್ಕಳ ಶಾಲೆಯಲ್ಲಿ ಕೈಗೊಂಡ ಚಟುವಟಿಕೆಗಳ ಬಗ್ಗೆ ವಿವರಿಸಿದರು.

ಬಾಗಲಕೋಟೆಯಿಂದ ದತ್ತು ಶಾಲೆಗಳ ವೀಕ್ಷಣೆಗೆ ಮತ್ತು ಹ್ಯಾಪಿ ಸ್ಕೂಲ್ ಘೋಷಣೆಗೆ ಆಗಮಿಸಿದ ಡಿಸ್ಟಿಕ್ ಎಡಿಟರ್ ಗೀತಾ ಗಿರಿಜಾ ಮಾತನಾಡಿ, ವಿಶೇಷ ಚೇತನ ಮಕ್ಕಳು ಎಂದರೆ ಅವರು ದೇವರ ಮಕ್ಕಳು. ಅವರ ಸೇವೆ ಮಾಡುವ ಸೌಭಾಗ್ಯ ಯೋಗ್ಯರಿಗೆ ಮಾತ್ರ ಸಿಗುವುದು. ಆ ಸೌಭಾಗ್ಯವನ್ನು ಪಡೆದ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಸದಸ್ಯರು ಧನ್ಯರು. ಈ ವಿಶೇಷವಾದ ಶಾಲೆಯನ್ನು ದತ್ತು ಪಡೆದು ಅವರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ್ದು ಸಂತಸದ ಸಂಗತಿ ಎಂದರಲ್ಲದೆ, ಸದಾ ಸಹಕರಿಸಿದ ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ದಂಡಿನರಿಗೆ ಧನ್ಯವಾದ ತಿಳಿಸಿದರು.

ಸಿಪಿಸಿಸಿ ಮೀನಾಕ್ಷಿ ಕೊರವನವರ ಮಾತನಾಡಿ, 'ದಿಶಾ ಐಐಎಲ್‌ಎಂ' ಅಡಿಯಲ್ಲಿ ಎಚ್.ಪಿ.ಕೆ.ಜಿ.ಎಸ್ ವಿಶೇಷ ಮಕ್ಕಳ ಶಾಲೆ ನಂಬರ್-4ನ್ನು ದತ್ತು ಪಡೆದ ಕಾರಣ ಮತ್ತು ಅಲ್ಲಿ ಪೂರೈಸಿದ ಅವಶ್ಯಕತೆಗಳ ಬಗ್ಗೆ ಮಾಹಿತಿಯನ್ನು ನೀಡಿದರು. ಕಾರ್ಯಕ್ರಮವನ್ನು ಸಂಸ್ಥೆಯ ಕಾರ್ಯದರ್ಶಿ ಶಿವಲೀಲಾ ಅಕ್ಕಿ ನೆರವೇರಿಸಿದರು. ಕ್ಲಬ್‌ನ ಮಾಜಿ ಅಧ್ಯಕ್ಷರುಗಳಾದ ಶ್ರೇಯಾ ಪವಾಡಶೆಟ್ಟರ, ಸರೋಜಾ ಆಲೂರ, ಶಾಂತಾ ನಿಂಬಣ್ಣವರ, ಅನ್ನಪೂರ್ಣಾ ವರವಿ ಭಾಗವಹಿಸಿದ್ದರು. ಜಯಶ್ರೀ ಉಗಲಾಟ, ಶಾರದಾ ಸಜ್ಜನರ, ಪುಷ್ಪಾ ಭಂಡಾರಿ, ಪೂಜಾ ಭೂಮಾ, ವೀಣಾ ಕಾವೇರಿ, ಶಿಲ್ಪಾ ಅಕ್ಕಿ, ಸಾಗರಿಕಾ ಅಕ್ಕಿ, ಪವಿತ್ರಾ ಬಿರಾದರ ಉಪಸ್ಥಿತರಿದ್ದರು.



ಲಕ್ಷ್ಮೇಶ್ವರದ ಎಸ್‌ಎಂಜೆವಿಜಿ ಪಿಯು ಕಾಲೇಜಿನ ವಿದ್ಯಾರ್ಥಿಗಳು ಥ್ರೋಬಾಲ್ ಹಾಗೂ 4/400 ರಿಲೇಯಲ್ಲಿ ಪ್ರಥಮ, ವಾಲಿಬಾಲ್, ಕಬಡ್ಡಿಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ವೈಯಕ್ತಿಕ ಆಟಗಳಲ್ಲಿ ಉದ್ದ ಜಿಗಿತ ದ್ವಿತೀಯ, ಭರ್ಚಿ ಎಸೆತ ದ್ವಿತೀಯ, 1500ಮೀ ದ್ವಿತೀಯ, ಚಕ್ರ ಎಸೆತ ತೃತೀಯ, 100/400 ರಿಲೇ ಮತ್ತು ಎತ್ತರ ಜಿಗಿತದಲ್ಲಿ ತೃತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ, ಪ್ರಾಚಾರ್ಯರು, ಉಪನ್ಯಾಸಕರು ಹರ್ಷ ವ್ಯಕ್ತಪಡಿಸಿದ್ದಾರೆ.

## ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ

▶▶ ಮೊದಲನೇ ಪುಟದಿಂದ

ಮುಂದಿನ ದಿನಮಾನಗಳಲ್ಲಿ ಮಾಸಿಕವಾಗಿ ಪ್ರಗತಿ ನಡೆಸಲಾಗುವುದು. ಇಲಾಖಾ ಮುಖ್ಯಸ್ಥರೇ ಸಭೆಗೆ ಹಾಜರಾಗಬೇಕು. ಜೊತೆಗೆ ಜಿಲ್ಲಾ ನೋಡಲ್ ಅಧಿಕಾರಿಗೆ ಪ್ರಗತಿ ವರದಿಯನ್ನು ಸಭೆಗೂ ಮುಂಚಿತವಾಗಿ ಸಲ್ಲಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಮಹಾತ್ವಾಕಾಂಕ್ಷಿ ಕಾರ್ಯಕ್ರಮ ಇದಾಗಿದ್ದು, ಆಡಳಿತ ವ್ಯವಸ್ಥೆ ಚುರುಕುಗೊಳಿಸಲು ಹಾಗೂ ಸಾರ್ವಜನಿಕರಿಗೆ ತ್ವರಿತವಾಗಿ ಸಮಸ್ಯೆಗೆ ಪರಿಹಾರ ಒದಗಿಸಲು ಪ್ರ.ಪ್ರ. ಜಾರಿಗೊಳಿಸಲಾಗಿದೆ. ಇದರ ಯಶಸ್ಸಿಗೆ ಅಧಿಕಾರಿ ವರ್ಗ ಶ್ರಮವಹಿಸಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಜಿಲ್ಲಾ ಎಸ್‌ಪಿ ರೋಹನ್ ಜಗದೀಶ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಆಹಾರ ಇಲಾಖೆಯ ಉಪನಿರ್ದೇಶಕ ರಮೇಶ, ಡಿಡಿಎಲ್‌ಆರ್ ರುದ್ರಣ್ಣಗೌಡ ಜಿ.ಜೆ, ಡಿಡಿಪಿಐ ಆರ್.ಎಸ್. ಬುರಡಿ, ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಶ್ರೀಮತಿ ವಸ್ತ್ರದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಸೋಮಶೇಖರ ಶಿವಾಚಾರ್ಯರ ಜೀವನ ಚರಿತ್ರೆ ಲೋಕಾರ್ಪಣೆಗೊಳಿಸಿದ ರಂಭಾಪುರಿ ಶ್ರೀಗಳು

# ಸ್ವಯಂಪ್ರೇರಣೆಯಿಂದ ಏಕತಾ ಸಭೆಯಲ್ಲಿ ಪಾಲ್ಗೊಳ್ಳಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಡಾ. ರಾಜೇಂದ್ರ ಗಚ್ಚಿನಮಠರು ರಚಿಸಿರುವ ಅಬ್ಬಿಗೆರೆ ಹಿರೇಮಠದ ಲಿಂ. ಶ್ರೀ ಸೋಮಶೇಖರ ಶಿವಾಚಾರ್ಯರ ಜೀವನ ಚರಿತ್ರೆಯ ಗ್ರಂಥವನ್ನು ಬಾಳೆಹೊನ್ನೂರಿನ ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯಭಗವತ್ಪಾದರು ರವಿವಾರ ಅಬ್ಬಿಗೆರೆ ಹಿರೇಮಠದಲ್ಲಿ ಲೋಕಾರ್ಪಣೆಗೊಳಿಸಿದರು.

ಶ್ರೀ ಸೋಮಶೇಖರ ಶಿವಾಚಾರ್ಯರ 5ನೇ ಪುಣ್ಯ ಸ್ಮರಣೋತ್ಸವ ಸಭೆಯ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಜಗದ್ಗುರುಗಳು, ಶ್ರೀ ಸೋಮಶೇಖರ ಶಿವಾಚಾರ್ಯರ ನುಡಿ ಸ್ವಲ್ಪ ಬಿರುಸಾಗಿತ್ತು. ಆದರೆ ಅವರ ಹೃದಯ ಮಾತ್ರ ಹೃದಯವಾಗಿತ್ತು. ನೇರ ನುಡಿಯ, ಭಕ್ತ ಪ್ರೇಮಿಯಾಗಿದ್ದ ಅವರು ಅಬ್ಬಿಗೆರೆ ಹಿರೇಮಠದಲ್ಲಿ ಮಾಡಿದ ಕೆಲಸಗಳು ಎಂದಿಗೂ ಮನನೀಯ. ಅವರನ್ನು ಕುರಿತು ಡಾ. ರಾಜೇಂದ್ರ ಗಚ್ಚಿನಮಠರು ಬರೆದ ಈ ಗ್ರಂಥವು ಸತ್ಯದ ಘಟನೆಗಳನ್ನು ಒಳಗೊಂಡಿದೆ ಎಂದರು.

ಈಗಿನ ಪೀಠಾಧಿಪತಿ ಶ್ರೀ ವೀರಭದ್ರ ಶಿವಾಚಾರ್ಯರು ತಮ್ಮ ಗುರುಗಳ ಆಸೆಯನ್ನು ಪೂರೈಸಿ ಕೃತಾರ್ಥರಾದರು.

ಬರುವ 22ರಿಂದ ಜನಗಣತಿಯ ಜೊತೆಗೆ ಜಾತಿ ಗಣತಿಯೂ ನಡೆಯಲಿದೆ. ಈ ಸಮಯದಲ್ಲಿ ನಾವು ನಮ್ಮ ಒಡಕನ್ನು ತೋರಿಸಿದರೆ ನಮ್ಮ ಸಂಖ್ಯೆ ಕಡಿಮೆಯಾಗಿ ನಾವುಗಳೇ ಅಲ್ಪಸಂಖ್ಯಾತರಾಗುವ ಅಪಾಯವಿದೆ. ಆದ್ದರಿಂದ ಈ ಬಗ್ಗೆ ಚರ್ಚಿಸಲು ಸೆ. 19ರಂದು ಹುಬ್ಬಳ್ಳಿಯ ನೆಹರೂ ಮೈದಾನದಲ್ಲಿ ಎಲ್ಲ ವೀರಶೈವ ಲಿಂಗಾಯತರ ಬೃಹತ್ ಸಮಾವೇಶವನ್ನು ಕರೆಯಲಾಗಿದೆ. ಎಲ್ಲರೂ ಸ್ವಯಂಪ್ರೇರಣೆಯಿಂದ ಈ ಏಕತಾ ಸಭೆಯಲ್ಲಿ ಪಾಲ್ಗೊಂಡು ಏನೆಲ್ಲ ನಿರ್ಧಾರಗಳಾಗುತ್ತದೆಯೋ ಅದರಂತೆ ಜಾತಿ ಗಣತಿಯಲ್ಲಿ ಬರೆಸಬೇಕು. ಈಗ ಹಿಂದೂಗಳು ಎಚ್ಚರಗೊಳ್ಳದಿದ್ದರೆ ಮುಂದೊಂದು ದಿನ ನಮಗೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಶ್ರೀಗಳು ಎಚ್ಚರಿಸಿದರು.

ಶಿವಯೋಗ ಮಂದಿರದಲ್ಲಿ ಶ್ರೀಮದ್ವೀರಶೈವ ಸಂಸ್ಥೆ ಹುಟ್ಟುವ ಪೂರ್ವದಲ್ಲಿಯೇ ಇಲ್ಲಿ ಸಂಸ್ಕೃತ ಪಾಠಶಾಲೆ ಪ್ರಾರಂಭವಾಗಿತ್ತು. ನಾಡಿನ ಅನೇಕ ಶಿವಾಚಾರ್ಯರು ಇಲ್ಲಿ ಓದಿದ್ದಾರೆ. ಮುಂದೆ ಈ ನಾಡಿನ ಮಠಮಾನ್ಯಗಳಿಗೆ ಪೀಠಾಧಿಪತಿಗಳನ್ನು ತಯಾರಿಸುವ ಸಂಸ್ಥೆಯನ್ನು ಹಾನಗಲ್ಲ ಶ್ರೀ ಗುರುಕುಮಾರೇಶ್ವರರು ಶಿವಯೋಗ ಮಂದಿರದಲ್ಲಿ ಸ್ಥಾಪಿಸಿ ಈ ನಾಡಿಗೆ ದೊಡ್ಡ ಕಾಣಿಕೆಯನ್ನು ನೀಡಿದ್ದಾರೆ ಎಂದರು.

ನರೇಗಲ್ಲ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಪ್ರವಚನ ನೀಡಿದರು. ಶ್ರೀ ವೀರಭದ್ರ ಶಿವಾಚಾರ್ಯರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಗುಳೇದಗುಡ್ಡದ ಒಪ್ಪತ್ತೇಶ್ವರ ಸ್ವಾಮೀಜಿ, ಸಂಗೊಳ್ಳಿಯ ಗುರುಲಿಂಗ ಶಿವಾಚಾರ್ಯರು, ಯಲಬುರ್ಗಾದ ಶ್ರೀ ಬಸವಲಿಂಗ ಶಿವಾಚಾರ್ಯರು ಆಶೀರ್ವಚನ ನೀಡಿದರು. ಬಾಬು ನೀರಲೋಟಿ ಸ್ವಾಗತಿಸಿದರು, ಅಂದಪ್ಪ ವೀರಾಪೂರ ನಿರೂಪಿಸಿದರು.

## ನಿಧನ


### ರುದ್ರಗೌಡ ಪಾಟೀಲ



**ಮುಳಗುಂದ:** ಪಟ್ಟಣದ ಸಮೀಪದ ಹರ್ತಿ ಗ್ರಾಮದ ರುದ್ರಗೌಡ ಪರ್ವತಗೌಡ ಪಾಟೀಲ (70) ಸೋಮವಾರ ನಿಧನರಾಗಿದ್ದಾರೆ.

ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಮಹ್ಮದಗೌಸ ಮೀರಾಸಾಬ ಢಾಲಾಯತ



**ಗದಗ:** ಗದಗ ಶಹರದ ರಾಯಲ್ ಆಂಗ್ಲ ಮಾಧ್ಯಮ ಪ್ರೌಢಶಾಲೆ ಸಂಸ್ಥಾಪಕ, ನಿವೃತ್ತ ಶಿಕ್ಷಕ ಜನಾಬ ಮಹ್ಮದಗೌಸ ಮೀರಾಸಾಬ ಢಾಲಾಯತ (86) ಸೋಮವಾರ ಸಾಯಂಕಾಲ ಪೈಗಂಬರವಾಸಿಗಳಾದರು. ಅವರ ಅಂತ್ಯಕ್ರಿಯೆಯನ್ನು ಸೆ.16, ಮಂಗಳವಾರ ಮುಂಜಾನೆ 11 ಗಂಟೆಗೆ ಗದಗ ನಗರದ ಜವುಗಳ ಗಲ್ಲಿಯಲ್ಲಿರುವ ಅವರ ಸ್ವಗೃಹದಿಂದ ಹೊರಡುವುದು. ಮೃತರು ಪತ್ನಿ, ಈರ್ವರು ಪುತ್ರಿಯರು, ಓರ್ವ ಪುತ್ರ, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.


# ಜಗತ್ತಿನ ಅತಿದೊಡ್ಡ ಪಕ್ಷ ಬಿಜೆಪಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ 14 ಕೋಟಿ ಸದಸ್ಯರನ್ನು ಹೊಂದುವ ಮೂಲಕ ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಿ ಬೆಳಿದಿದೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ (ರಾಜು) ಕುರುಡಗಿ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, 2 ಕೋಟಿ ಜನ ಸಕ್ರಿಯ ಸದಸ್ಯರಾಗಿದ್ದಾರೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ. ನಡ್ಡಾ ಭಾನುವಾರ ವಿಶಾಖಪಟ್ಟಣದಲ್ಲಿ ಏರ್ಪಡಿಸಿದ್ದ ಪಕ್ಷದ ಸಮಾವೇಶದಲ್ಲಿ, ದೇಶದ 13 ರಾಜ್ಯಗಳಲ್ಲಿ ಬಿಜೆಪಿ ಸರ್ಕಾರವಿದೆ. ಈ ಮೂಲಕ ನಮ್ಮದು ದೇಶದ ಅತಿದೊಡ್ಡ ಪ್ರಾತಿನಿಧಿಕ ಪಕ್ಷವಾಗಿದೆ ಎಂದು ಪ್ರಕಟಿಸಿರುವದು ಸ್ವಾಗತಾರ್ಹ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.






ನಗರದ ವೀರಶೈವ ಲೈಬ್ರರಿ ಬಳಿಯ ಶ್ರೀ ಸುದರ್ಶನಚಕ್ರ ಯುವಮಂಡಳಿ ವತಿಯಿಂದ ಪ್ರತಿಷ್ಠಾಪಿಸಲಾದ ಹಿಂದೂ ಮಹಾಗಣಪತಿ ಸನ್ನಿಧಿಗೆ ಸೋಮವಾರ ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ ಭೇಟಿ ನೀಡಿ ಗಜಾನನ ದರ್ಶನಾಶೀವಾದ ಪಡೆದರು. ಈ ಸಂದರ್ಭದಲ್ಲಿ ಶಾಸಕರನ್ನು ಯುವಮಂಡಳಿ ಹಾಗೂ ಹಿಂದೂ ಮಹಾಗಣಪತಿ ಸಂಘಟನೆಯ ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

### ಅಶೋಕ ಮಂದಾಲಿ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆ

# ಯೋಜನೆ ಅನುಷ್ಠಾನದಲ್ಲಿ ಪ್ರಾಮಾಣಿಕತೆಯಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನಲ್ಲಿ ರೇಶನ್ ಕಾರ್ಡ್‌ಗೆ ಅರ್ಹರಿರುವ ಫಲಾನುಭವಿಗಳ ಸರ್ವೆ ಕಾರ್ಯವನ್ನು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ಯಾರಂಟಿ ಸಮಿತಿ ಸದಸ್ಯರು ಜಂಟಿಯಾಗಿ ನಡೆಸುವಂತೆ ತಾಲೂಕಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯಿತಿ ವಿಸಿ ಹಾಲ್‌ನಲ್ಲಿ ಸೋಮವಾರ ನಡೆದ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆ ಲಭಿಸುವಲ್ಲಿ ಫಲಾನುಭವಿಗಳಿಗೆ ಅಡಚಣೆಗಳು ಉಂಟಾದರೆ ಅಂತಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಆದ್ದರಿಂದ ಪ್ರತಿ ಮೂರು ಪಂಚಾಯಿತಿ ಸೇರಿಸಿ ಜನಸ್ಪಂದನ ಸಭೆ ಮಾಡಲಾಗುವುದು ಎಂದು ಸಭೆಯ ಗಮನಕ್ಕೆ ತಂದರು.



ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ಜಿಲ್ಲೆಯ ವಿವಿಧ ಬಸ್ ನಿಲ್ದಾಣಗಳಿಗೆ ವಾರಕ್ಕೊಮ್ಮೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯ ಸೇರಿದಂತೆ ಸ್ವಚ್ಛತೆಯ ಕುರಿತು ನಿಗಾ ವಹಿಸಬೇಕು ಎಂದು ಸೂಚಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಜೂನ್ 2025ರವರೆಗೆ ಗದಗ ತಾಲೂಕಿನಲ್ಲಿ ಯಜಮಾನಿ ಹೆಸರಿನಲ್ಲಿ ಒಟ್ಟು 81959 ಜನರು ಪಡಿತರ ಹೊಂದಿದ್ದಾರೆ. 80911 ಅರ್ಜಿಗಳು ನೋಂದಣಿಯಾಗಿದ್ದು, ಅದರಲ್ಲಿ 80447 ಅರ್ಜಿಗಳಿಗೆ ಮಂಜೂರಾತಿ ದೊರೆತು ಶೇ 99.42ರಷ್ಟು ಪ್ರಗತಿ ಸಾಧಿಸಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಗದಗ-ಬೆಟಗೇರಿಯಲ್ಲಿ (ಐಆರ್‌ಎ) ಆಗಸ್ಟ್ 2025ರ ಮಾಹೆಯಲ್ಲಿ ರಾಜ್ಯ ಸರಕಾರಿ ಅನ್ನಭಾಗ್ಯ ಹಂಚಿಕೆ ಯೋಜನೆಯಡಿ ಒಟ್ಟು 33558 ಪಡಿತರ ಕಾರ್ಡುಗಳಿದ್ದು (ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡ್‌ಗಳು) 5536.05 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಆಗಸ್ಟ್-2025 ಮಾಹೆಯಲ್ಲಿ (ಕೇಂದ್ರ ಸರ್ಕಾರ) ಎನ್‌ಎಫ್‌ಎಸ್‌ಎ ಅಕ್ಕಿ ಹಂಚಿಕೆಯಡಿ ಒಟ್ಟು 33558 ಕಾರ್ಡ್‌ಗಳಿದ್ದು (ಅಂತ್ಯೋದಯ ಮತ್ತು ಬಿಪಿಎಲ್) 2326.76 ಕ್ವಿಂಟಾಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ 31-8-2025ರವರೆಗೆ ಗದಗ ಶಹರ ಉಪವಿಭಾಗದಲ್ಲಿ 46482 ಸ್ಥಾವರಗಳು ಅರ್ಹವಾಗಿದ್ದು, 46267 ಸ್ಥಾವರಗಳ ನೋಂದಣಿಯೊಂದಿಗೆ ಶೇ. 99.54 ಪ್ರಗತಿಯಾಗಿದೆ. 31-8-2025ರವರೆಗೆ ಗೃಹಜ್ಯೋತಿ ಯೋಜನೆಯಡಿ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಾಗಿದ್ದು, 53070 ಸ್ಥಾವರಗಳ ನೋಂದಣಿಯಾಗಿ ಶೇ. 99.63 ಪ್ರಗತಿಯಾಗಿದೆ.

ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ 31-8-2025ರವರೆಗೆ 2231 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಅದರಲ್ಲಿ 1761 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು.

ಸಭೆಗೂ ಮುನ್ನ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಸಂವಿಧಾನದ ಪ್ರಸ್ತಾವನೆಯನ್ನು ಜಿಲ್ಲಾ ಸಮಿತಿ ಸದಸ್ಯ ಶರೀಫ್ ಬೆಳೆಯಲಿ ಬೋಧಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಉಪಾಧ್ಯಕ್ಷೆ ನಿಲಮ್ಮ ಬೋಳನವರ, ಸದಸ್ಯರುಗಳಾದ ಈರಣ್ಣ ಹುನಸಿಕಟ್ಟಿ, ಶರೀಫ ಬೆಳೆಯಲಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ದಯಾನಂದ ಪವಾರ, ಶಂಭು ಕಾಳೆ, ಸಾವಿತ್ರಿ ಹೂಗಾರ, ಸಂಗು ಕೆರಕಲಕಟ್ಟಿ, ಎನ್.ಬಿ. ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿಕಾಯ್ಕರ, ದೇವರಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ ಚಿಂಚಲಿ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಹಾಗೂ ಪಂಚ ಗ್ಯಾರಂಟಿ ಯೋಜನೆಗೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

> ರಾಜ್ಯ ಸರ್ಕಾರದಿಂದ ಜಾರಿಯಾಗಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು, ಈ ಯೋಜನೆಗಳ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ಒದಗಿಸುವಲ್ಲಿ ವಿಳಂಬವಾಗಬಾರದು. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಶೇ. 100ರಷ್ಟು ಪ್ರಗತಿ ಸಾಧಿಸಲು ಸಂಬಂಧಿತ ಅಧಿಕಾರಿಗಳು ಆಸಕ್ತಿಯಿಂದ ಕಾರ್ಯ ನಿರ್ವಹಿಸಬೇಕು. ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಪ್ರಾಮಾಣಿಕತನವಿರಬೇಕು ಎಂದು ಅಶೋಕ ಮಂದಾಲಿ ತಿಳಿಸಿದರು.

# ಸರ್ಕಾರಿ ಶಾಲೆಗಳು ಸದೃಢ ಸಮಾಜದ ಅಡಿಪಾಯ



■ವಿಜಯಸಾಕ್ಷಿ ಸುದ್ದಿ, ಗದಗ

ಖಾಸಗಿ ಶಾಲೆಗಳಂತೆ ಸರ್ಕಾರಿ ಶಾಲೆಗಳಲ್ಲಿಯೂ ಉತ್ತಮ ಶಿಕ್ಷಕರು ಇರುತ್ತಾರೆ. ಆದ್ದರಿಂದ ಸರ್ಕಾರಿ ಶಾಲೆಗಳು ಸದೃಢ ಸಮಾಜದ ಅಡಿಪಾಯವಾಗಿವೆ ಎಂದು ಬಾಗಲಕೋಟೆಯ ಡಿಸ್ಟ್ರಿಕ್ಟ್ ಎಡಿಟರ್ ಗೀತಾ ಗಿರಿಜಾ ಹೇಳಿದರು.

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿಯಿಂದ ದತ್ತು ಪಡೆದ ಎಚ್‌ಪಿಕೆಜಿಎಸ್ ಶಾಲೆ ನಂ.2ರ ವೀಕ್ಷಣೆ ಮತ್ತು ಹ್ಯಾಪಿ ಸ್ಕೂಲ್ ಘೋಷಣೆಗೆ ಆಗಮಿಸಿದ ಅವರು ಸರ್ಕಾರದಿಂದ ಅನೇಕ ಸವಲತ್ತುಗಳನ್ನು ಪಡೆದು ಸಮರ್ಥ ಶಿಕ್ಷಕರಿಂದ ಶಿಕ್ಷಣವನ್ನು ಪಡೆಯುವ ವಿದ್ಯಾರ್ಥಿಗಳು ತಮ್ಮ ಭವ್ಯ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದರು.

ಕ್ಲಬ್‌ನ ಹಿರಿಯ ಸದಸ್ಯರಾದ ಸುಶೀಲಾ ಕೋಟಿ ಶಾಲೆಯ ವಾತಾವರಣ, ಮಕ್ಕಳ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳ ಬಗ್ಗೆ ಹಾಗೂ ಶಾಲೆ ಹಾಗೂ ಇನ್ನರ್‌ವ್ಹೀಲ್ ಕ್ಲಬ್‌ನ ನಡುವಿನ ಒಡನಾಟದ ಬಗ್ಗೆ ವಿವರಿಸಿದರು.

ಶಾಲಾ ಮುಖ್ಯೋಪಾಧ್ಯಾಯರಾದ ದಲಬಂಜನ ಗುರುಗಳು ಮಾತನಾಡಿ, ಇನ್ನರ್ ವ್ಹೀಲ್ ಕ್ಲಬ್‌ನಿಂದ ತಮ್ಮ ಶಾಲೆಗೆ ಆದ ಅನುಕೂಲಗಳು ಹಾಗೂ ದೊರೆತ ಸೌಲಭ್ಯಗಳಿಗೆ ಧನ್ಯವಾದ ತಿಳಿಸಿದರು.

ಸಿಪಿಸಿಸಿ ಮೀನಾಕ್ಷಿ ಕೊರವನವರ ಅವರು ದಿಶಾ ಐ.ಐ.ಎಲ್.ಎಂ ಅಡಿಯಲ್ಲಿ 2ನೇಯ ಹ್ಯಾಪಿ ಸ್ಕೂಲ್ ಆಗಿ ಮಾಡಲು ಕೈಗೊಂಡ ಕಾರ್ಯಗಳನ್ನು ವಿವರಿಸಿದರು. ಕಾರ್ಯದರ್ಶಿ ಶಿವಲೀಲಾ ಅಕ್ಕಿ ಕಾರ್ಯಕ್ರಮವನ್ನು ನೆರವೇರಿಸಿದರು.

ಈ ಕಾರ್ಯಕ್ರಮದಲ್ಲಿ ಕ್ಲಬ್‌ನ ಮಾಜಿ ಅಧ್ಯಕ್ಷರುಗಳಾದ ಶಾಂತಾ ನಿಂಬಣ್ಣವರ, ಸರೋಜಾ ಆಲೂರ, ಅನ್ನಪೂರ್ಣಾ ವರವಿ, ಸದಸ್ಯರಾದ ಜಯಶ್ರೀ ಉಗಲಾಟ, ಶಾರದಾ ಸಜ್ಜನರ, ಸಂಧ್ಯಾ ಕೋಟಿ, ಪುಷ್ಪಾ ಭಂಡಾರಿ, ಪೂಜಾ ಭೂಮಾ, ವೀಣಾ ಕಾವೇರಿ, ಶಿಲ್ಪಾ ಅಕ್ಕಿ, ದೀಪಾ ಪಟ್ಟಣಶೆಟ್ಟಿ, ವಿಜಯಲಕ್ಷ್ಮೀ ಮಾನ್ವಿ, ಸಾಗರಿಕಾ ಅಕ್ಕಿ ಹಾಗೂ ಬಾಗಲಕೋಟೆಯ ಪಾಸ್ಟ್ ಎಡಿಟರ್ ಪೂರ್ಣಿಮಾ ಉಪಸ್ಥಿತರಿದ್ದರು.

> ಅಧ್ಯಕ್ಷರಾದ ಅಶ್ವಿನಿ ಜಗತಾಪ್ ಮಾತನಾಡಿ, ವಿದ್ಯಾರ್ಥಿನಿಯರ ಕ್ಷೇಮಾಭಿವೃದ್ಧಿ ಉದ್ದೇಶದಿಂದ ಹೆಣ್ಣು ಮಕ್ಕಳ ಶಾಲೆಯನ್ನು ದತ್ತು ಪಡೆದು, ಮೂಲಭೂತ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ನಮ್ಮ ಕ್ಲಬ್‌ನಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯದ ದುರಸ್ತಿ ಹಾಗೂ ಇನ್ನಿತರ ಅವಶ್ಯಕ ಕಾರ್ಯಗಳನ್ನು ಕೈಗೊಂಡಿದ್ದೇವೆ ಎಂದು ಹೇಳಿದರು.

# ಕೃಷಿ ಮೇಳಕ್ಕೆ ಅಧ್ಯಯನ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವ ನೋಪಾಯ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಸಂಜೀವಿನಿ-ಡೇ-ಎನ್.ಆರ್.ಎಲ್. ಯೋಜನೆಯಡಿ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿರುವ ಕೃಷಿ ಮೇಳದಲ್ಲಿ ಪಾಲ್ಗೊಳ್ಳಲು ಅನುಕೂಲವಾಗುವಂತೆ ಅಧ್ಯಯನ ಪ್ರವಾಸ ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಗದಗ ಜಿಲ್ಲಾ ಪಂಚಾಯಿತಿಯಿಂದ 26 ಬಸ್‌ಗಳ ಮೂಲಕ ಒಟ್ಟು 1345 ರೈತ ಮಹಿಳೆಯರಿಗೆ ಭಾಗವಹಿಸಲು ವ್ಯವಸ್ಥೆ ಕಲ್ಪಿಸಲಾಗಿದೆ.

ಸೋಮವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ನಗರದ ಜಿಲ್ಲಾಡಳಿತ ಭವನದಲ್ಲಿ ಅಧ್ಯಯನ ಪ್ರವಾಸಕ್ಕೆ ಹೊರಟಿರುವ ಬಸ್‌ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ, ಕೃಷಿ ಮೇಳದಲ್ಲಿ ಭಾಗವಹಿಸುತ್ತಿರುವ ಕೃಷಿ ಸಖಿ, ಪಶು ಸಖಿ ಹಾಗೂ ರೈತ ಮಹಿಳೆಯರು ಮೇಳದಲ್ಲಿ ಕೃಷಿಗೆ ಸಂಬಂಧಿತ ಇತ್ತೀಚಿನ ತಂತ್ರಜ್ಞಾನ, ಕೃಷಿ ಪದ್ಧತಿಗಳನ್ನು ತಿಳಿದುಕೊಂಡು ತಮ್ಮ ಬೇಸಾಯ ಪದ್ಧತಿಗಳಲ್ಲಿ ಅಳವಡಿಸಿಕೊಳ್ಳುವಂತಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಜಿ.ಪಂ ಯೋಜನಾ ನಿರ್ದೇಶಕರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸಂಜೀವಿನಿ ಯೋಜನೆಯ ಸಿಬ್ಬಂದಿಗಳು, ಕೃಷಿ ಜೀವನೋಪಾಯ ಚಟುವಟಿಕೆಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಹಾಗೂ ರೈತ ಮಹಿಳೆಯರು ಹಾಜರಿದ್ದರು.




ಗದಗ ಜಿಲ್ಲಾಡಳಿತ ಭವನದಿಂದ ರವಿವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಗದುಗಿನಿಂದ ಬೆಂಗಳೂರಿಗೆ ಬೈಕ್ ರ್‍ಯಾಲಿ ಏರ್ಪಡಿಸಲಾಗಿತ್ತು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಬೈಕ್ ರ್‍ಯಾಲಿಗೆ ಚಾಲನೆ ನೀಡಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಮುಂತಾದವರು ಉಪಸ್ಥಿತರಿದ್ದರು.

## ಈ ದೇಶದ ಭವಿಷ್ಯಕ್ಕೆ ಬುನಾದಿ ಹಾಕುವಲ್ಲಿ ಇಂಜಿನಿಯರ್‌ಗಳ ಜವಾಬ್ದಾರಿ ಮಹತ್ವದ್ದಾಗಿದೆ: ಡಿ.ಕೆ. ಶಿವಕುಮಾರ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

"ಈ ದೇಶದ ಭವಿಷ್ಯಕ್ಕೆ ಬುನಾದಿ ಹಾಕುವಲ್ಲಿ ಇಂಜಿನಿಯರ್ ಗಳ ಜವಾಬ್ದಾರಿ ಮಹತ್ವದ್ದಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬಣ್ಣಿಸಿದರು. ಇಂಜಿನಿಯರ್ ದಿನಾಚರಣೆ ಅಂಗವಾಗಿ ನಗರದ ಕೆ.ಆರ್. ವೃತ್ತದಲ್ಲಿರುವ ಸರ್.ಎಂ. ವಿಶ್ವೇಶ್ವರಯ್ಯ ಅವರ ಪುತ್ಥಳಿಗೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಶಿವಕುಮಾರ್ ಅವರು ಪುಷ್ಪನಮನ ಸಲ್ಲಿಸಿದ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಇಂದು ಸರ್.ಎಂ ವಿಶ್ವೇಶ್ವರಯ್ಯ ಅವರ ಜನ್ಮದಿನದ ಅಂಗವಾಗಿ ಅಭಿಯಂತರರ (ಇಂಜಿನಿಯರ್ಸ್) ದಿನ ಆಚರಿಸಲಾಗುತ್ತಿದೆ. ಸಚಿವನಾಗಿ ಜಿಬಿಎ ಹಾಗೂ ನೀರಾವರಿ ಇಲಾಖೆಯಲ್ಲಿರುವ ಇಂಜಿನಿಯರ್ ಗಳ ಜೊತೆ ಕೆಲಸ ಮಾಡುತ್ತಿದ್ದೇನೆ. ಈ ಹಿಂದೆ ನಗರಾಭಿವೃದ್ಧಿ ಹಾಗೂ ಇಂಧನ ಸಚಿವನಾಗಿದ್ದಾಗಲೂ ಕೆಲಸ ಮಾಡಿದ್ದೆ.

# ಊಹಾ ಪತ್ರಿಕೋದ್ಯಮ ಮೊದಲು ನಿಲ್ಲಿಸಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮೊದಲು ನೀವೆಲ್ಲಾ ಊಹಾ ಪತ್ರಿಕೋದ್ಯಮವನ್ನು ನಿಲ್ಲಿಸಿ. ಇದು ಸಮಾಜಕ್ಕೆ ಹಾನಿಕರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲೆಕ್ಟ್ರಾನಿಕ್ ಮೀಡಿಯಾ ಪತ್ರಕರ್ತರಿಗೆ ಕರೆ ನೀಡಿದರು.

ಕರ್ನಾಟಕ ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ಉದ್ಘಾಟಿಸಿ, ಲೋಗೋ ಬಿಡುಗಡೆ ಮಾಡಿ ಮಾತನಾಡಿದರು.

ನಾನು ರಾಜಕಾರಣ-ಕ್ಕೆ ಬಂದು ಇಷ್ಟು ವರ್ಷದಲ್ಲಿ ಯಾವ ಮಾಧ್ಯಮಗಳಿಗೂ ನನ್ನ ಬಗ್ಗೆ ಹೀಗೇ ಬರೆಯಿರಿ, ಹಾಗೇ ಬರೆಯಿರಿ ಎಂದು ಯಾವತ್ತೂ ಹೇಳಿಲ್ಲ. ನನ್ನ ಬಗ್ಗೆ ಸುಳ್ಳುಗಳನ್ನು ಸತತವಾಗಿ ತೋರಿಸುವಾಗಲೂ ಯಾಕೆ ಹೀಗೆ ತೋರಿಸ್ತೀರಿ ಎಂದೂ ಯಾರಿಗೂ ಕೇಳಿಲ್ಲ. ನಿಮ್ಮಿಂದ ನನಗೆ ಏನೇನೂ ಅಪೇಕ್ಷೆ ಇಲ್ಲ. ಸಾಧ್ಯವಾದರೆ ಸತ್ಯ ತೋರಿಸಿ, ಸತ್ಯ ಬರೆಯಿರಿ ಎಂದರು.

ನನ್ನ ಕಾರಿನ ಮೇಲೆ ಕಾಗೆ ಕುಳಿತ ಸಂದರ್ಭದಲ್ಲಿ ದೊಡ್ಡ ದೊಡ್ಡ ಚರ್ಚೆ ನಡೆಸಿದರು. ಆ ಚರ್ಚೆಯಲ್ಲಿ ಜ್ಯೋತಿಷಿಗಳು, ಚಾನನೆಲ್‌ಗಳು ತೋರಿಸಿದ್ದೆಲ್ಲಾ ಅಪ್ಪಟ ಸುಳ್ಳಾಯ್ತು. ನೀವು ಹೀಗೆಲ್ಲಾ ತೋರಿಸಿದರೆ ಜನ ಒಪ್ಪುತ್ತಾರಾ ಎಂದು ಯೋಚನೆ ಮಾಡಿ ಎಂದರು.

ಬ್ಲಾಕ್‌ಮೇಲ್ ಮತ್ತು ಕೀಳು ಮಟ್ಟದ ಪ್ರಾಕ್ಟೀಸ್ ಮಾಡುತ್ತಿರುವ ಯುಟ್ಯೂಬ್ ಚಾನಲ್‌ಗಳು ಸಮಾಜಕ್ಕೆ ಶಾಪವಾಗಿದ್ದು, ಇಂಥವರಿಂದ ಪತ್ರಿಕೋದ್ಯಮದ ಘನತೆ ಹಾಳಾಗಿದೆ. ಹೀಗಾಗಿ ಯುಟ್ಯೂಬ್ ಚಾನೆಲ್‌ಗಳ ಹಾವಳಿ ತಡೆಯಲು ಇವರಿಗೂ ಲೈಸೆನ್ಸ್ ಕಡ್ಡಾಯಗೊಳಿಸಬೇಕು ಎಂದು ಸಂಘ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಿತು. ಈ ಬೇಡಿಕೆ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗಿವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.



### ಶಾಲಾ ಆಡಳಿತ ಮಂಡಳಿಯೊಂದಿಗೆ ಭೂದಾನಿ ದ್ಯಾಮಣ್ಣ ತೋಟದ ಕುಟುಂಬದವರ ವಾಗ್ವಾದ

# ಒಡಂಬಡಿಕೆಯನ್ನು ಗಾಳಿಗೆ ತೂರಿತಾ ಶಾಲೆ?

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದ ನವಚೇತನ ವಿದ್ಯಾನಿಕೇತನ ಶಿಕ್ಷಣ ಸಂಸ್ಥೆಯ ಕಟ್ಟಡ ನಿರ್ಮಾಣಕ್ಕೆ ಭೂದಾನ ಮಾಡಿದ ದ್ಯಾಮಣ್ಣ ತೋಟದ ಅವರ ಹೆಸರಿಡುವ ಒಡಂಬಡಿಕೆಯನ್ನು ಗಾಳಿಗೆ ತೂರಿದ್ದಾರೆಂದು ತೋಟದ ಕುಟುಂಬ ಮತ್ತು ಅಭಿಮಾನಿಗಳು ಸೋಮವಾರ ಶಾಲೆಗೆ ಆಗಮಿಸಿ ಆಕ್ರೋಶ ವ್ಯಕ್ತಪಡಿಸಿದರು.

ಶಾಲಾರಂಭದ ವೇಳೆಯಲ್ಲಿ ಕುಟುಂಬದವರು ಕೆಲ ಮುಖಂಡರೊಂದಿಗೆ ಆಗಮಿಸಿ ಆಡಳಿತ ಮಂಡಳಿಯವರೊಂದಿಗೆ ವಾಗ್ವಾದಕ್ಕಿಳಿದರು. ದ್ಯಾಮಣ್ಣ ತೋಟದ ಅವರು ಯಾವುದೇ ಫಲಾಪೇಕ್ಷೆ ಇಲ್ಲದೇ ಗ್ರಾಮದ ಮಕ್ಕಳ ಶೈಕ್ಷಣಿಕ ಕಳಕಳಿಯಿಂದ 2 ಎಕರೆ ಭೂಮಿಯನ್ನು ದಾನವಾಗಿ ನೀಡಿದ್ದಾರೆ. ದಾನಪತ್ರದಲ್ಲಿ ಶಾಲೆಗೆ ದ್ಯಾಮಣ್ಣ ತೋಟದ ಅವರ ಹೆಸರು ನಾಮಕರಣ ಮಾಡಲು ಒಡಂಬಡಿಕೆಯಾಗಿ ಆಡಳಿತ ಮಂಡಳಿಯೂ ಒಪ್ಪಿತ್ತು. ಆದರೆ ಇದೀಗ ಭೂದಾನಿಗಳ ಬದಲಾಗಿ ಬೇರೆಯವರ ಹೆಸರು ನಾಮಕರಣವಾಗಿರುವುದು ಕುಟುಂಬದವರಿಗೆ ನೋವುಂಟು ಮಾಡಿದೆ. ಆದ್ದರಿಂದ ನಮ್ಮ ಭೂಮಿ ನಮಗೆ ಕೊಡಿ, ಇಲ್ಲಿ ಶಾಲೆ ನಡೆಸುವದು ಬೇಡ ಎಂದು ಒತ್ತಾಯಿಸಿದರು.



ವಿಷಯ ತಿಳಿದು ಶಾಲೆಗೆ ಆಗಮಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ, ಆಡಳಿತ ಮಂಡಳಿ, ತೋಟ-ದ ಕುಟುಂಬದವರು ಹಾಗೂ ಗ್ರಾಮದ ಮುಖಂಡರೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಭೂದಾನ ವೇಳೆ ಆದ ಎಲ್ಲ ಮಾತುಕತೆ, ಒಪ್ಪಂದದ ಬಗ್ಗೆ ತೋಟದ ಕುಟುಂಬದವರು ವಿವರಿಸಿದರು. ಈ ವೇಳೆ ಆಡಳಿತ ಮಂಡಳಿಯವರು ಶಾಲೆಗೆ ಭೂದಾನಿಗಳ ನಾಮಕರಣಕ್ಕೆ ಆಡಳಿತ ಮಂಡಳಿಯವರೆಲ್ಲರ ಸಹಮತವಿದೆ. ದಾಖಲೆ ಮಾಡುವಾಗ ತಾಂತ್ರಿಕ ಸಮಸ್ಯೆಯಿಂದ ದಾಖಲೆ ಪತ್ರದಲ್ಲಿ ಹೆಸರು ಬದಲಾಗಿದೆ. ಈ ಕುರಿತಂತೆ ಮೇಲಾಧಿಕಾರಿಗಳಿಗೆ ಆಡಳಿತ ಮಂಡಳಿಯವರ ಮನವಿ ಪತ್ರ ಹಾಗೂ ಭೂದಾನಿಗಳ ಪತ್ರಗಳೊಂದಿಗೆ ದಾಖಲೆ ಸಲ್ಲಿಸಲಾಗುವುದು. ಸರಿಪಡಿಸಲು ಒಂದಷ್ಟು ಕಾಲಾವಕಾಶ ಅಗತ್ಯವಿದ್ದು, ಶೈಕ್ಷಣಿಕ ಕಾರ್ಯ ಚಟುವಟಿಕೆಗಳಿಗೆ ತೊಂದರೆ-ಯಾಗದಂತೆ ಸಹಕರಿಸಬೇಕು ಎಂದು ಭರವಸೆ ನೀಡಿದರು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಎನ್.ಬಿ. ಹರವಿ, ಕಾರ್ಯದರ್ಶಿ ಸುಭಾಸ ಹುಲಗೂರ, ಆರ್. ಎಚ್. ಗದಗ, ಸಂಜೀವ ತೆ-ೂೕಟದ, ಅಶೋಕ ತೋಟದ, ಡಾ. ರಾಹುಲ್ ತೋಟದ, ಸೂಗೀರಪ್ಪ ಬೆಳವಿಗಿ, ಸುರೇಶ ಭಂಡಾರಿ, ಬಸವರಾಜ ಹಂಜಿ ಸೇರಿದಂತೆ ಹಿರಿಯರು, ತೋಟದ ಕುಟುಂಬದವರು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka